# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 131 | Volume - 01 Issue - 131
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | Title- Code: KARKAN 28269
ಚಿತ್ರದುರ್ಗ | Chitradurga
ದಿನಾಂಕ: 05–12–2023 ಮಂಗಳವಾರ | Date: 05-12-2023 Tuesday
ಪುಟ: 4 | Page: 4
ಬೆಲೆ : ರೂ.2–00 | Price: Rs. 2-00



**ಒಳಪುಟದ ಸುದ್ದಿಗಳು**

ಮದ್ಯ ಮಾರಾಟ ತಡೆಯಲು ತಹಶೀಲ್ದಾರ್‌ಗೆ ಮನವಿ ಸಲ್ಲಿಕೆ 2

ಹಿಂದಿನ ಜಿಪಂ ಸಿಇಓ ವಿರುದ್ಧ ಕ್ರಿಮಿನಲ್ ಕೇಸ್ ದಾಖಲು ಮಾಡುವಂತೆ ಆಗ್ರಹ 3

ಅಂಬಾರಿ ಹೊತ್ತ ಅರ್ಜುನ ಕಾಳಗದಲ್ಲಿ ಬಲಿ: ವನ್ಯಜೀವಿ ಸಂರಕ್ಷಣಾ ವೇದಿಕೆ ಸಂತಾಪ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಡಿ.7ರಂದು ಶಾಲಾ ಕಟ್ಟಡ ಉದ್ಘಾಟನಾ ಸಮಾರಂಭ

■ ಚಳ್ಳಕೆರೆ

ತಾಲ್ಲೂಕಿನ ತಳಕು ಗ್ರಾಮದಲ್ಲಿ ವೆಂಕಣ್ಣಯ್ಯ ವಿದ್ಯಾಸಂಸ್ಥೆಯ ಮಾರುತಿ ಹಿರಿಯ ಪ್ರಾಥಮಿಕ ಶಾಲೆ ನೂತನ ಕಟ್ಟಡ ಪ್ರಾರಂಭೋತ್ಸವ ಹಾಗೂ ವಸ್ತು ಪ್ರದರ್ಶನ ಕಾರ್ಯಕ್ರಮ ಡಿ.7ರ ಬೆಳಗ್ಗೆ 10ಕ್ಕೆ ನಡೆಯಲಿದೆ ಎಂದು ಸಂಸ್ಥೆಯ ಕಾರ್ಯದರ್ಶಿ ಎನ್.ನೇತ್ರಾವತಿ ತಿಳಿಸಿದ್ದಾರೆ. ಅವರು ಈ ಬಗ್ಗೆ ಮಾಹಿತಿ ನೀಡಿ, ನೂತನ ಕಟ್ಟಡ ಪ್ರಾರಂಭೋತ್ಸವವನ್ನು ಚಿತ್ರದುರ್ಗ ಜಿಲ್ಲಾ ಡಿಡಿಪಿಐ ರವಿಶಂಕರರೆಡ್ಡಿ ನೆರವೇರಿಸಲಿದ್ದು, ವಸ್ತು ಪ್ರದರ್ಶನವನ್ನು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಉದ್ಘಾಟಿಸುವರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಬೈಯಣ್ಣ, ಬಳ್ಳಾರಿ ಮಕ್ಕಳ ಮತ್ತು ಮಹಿಳಾ ಕಲ್ಯಾಣ ಇಲಾಖೆ ಉಪನಿರ್ದೇಶಕ ವಿಜಯಕುಮಾರ್, ಮದಕರಿ ವಿದ್ಯಾಸಂಸ್ಥೆ ಅಧ್ಯಕ್ಷ ಎಸ್.ಸಂದೀಪ್, ನಿವೃತ್ತ ಮುಖ್ಯ ಶಿಕ್ಷಕ ಕೆ.ಸೂರನಾಯಕ, ಸರ್ಕಾರಿ ನೌಕರರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಸಿ.ಟಿ.ವೀರೇಶ್ ಮುಂತಾದವರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

### 24ರಂದು ಕರೇಕಲ್ ಶ್ರೀಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಹನುಮ ಜಯಂತಿ

■ ಚಳ್ಳಕೆರೆ

ತಾಲ್ಲೂಕಿನ ಪುರಾತನ ದೇವಸ್ಥಾನಗಳಲ್ಲಿ ಒಂದಾದ ನಾಯಕನಹಟ್ಟಿ ರಸ್ತೆಯ ಶ್ರೀಕರೇಕಲ್ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಡಿ.24ರಂದು ಪ್ರತಿವರ್ಷದಂತೆ ಈ ವರ್ಷವೂ ಹನುಮ ಜಯಂತೋತ್ಸವ ಕಾರ್ಯಕ್ರಮವನ್ನು ಭಕ್ತಿ, ಶ್ರದ್ಧೆಯಿಂದ ಆಚರಿಸಲಾಗುವುದು ಎಂದು ಆರ್ಚಕ, ವೇದಬ್ರಹ್ಮ ಸಿ.ಎನ್.ನಾಗಶಯನಗೌತಮ್ ತಿಳಿಸಿದ್ದಾರೆ. ಅಂದು ಬೆಳಗಿನಿಂದಲೇ ಸುಪ್ರಭಾತದೊಂದಿಗೆ ಕಾರ್ಯಕ್ರಮ ಆರಂಭವಾಗಲಿದ್ದು, ಆಂಜನೇಯಸ್ವಾಮಿಗೆ ವಿಶೇಷ ಅಲಂಕಾರ ಹಾಗೂ ಪೂಜೆ ಕಾರ್ಯಕ್ರಮಗಳನ್ನು ನಡೆಸಲಾಗುವುದು. ಪೂಜೆಯ ನಂತರ ಆಗಮಿಸಿದ ಎಲ್ಲಾ ಭಕ್ತರಿಗೆ ಪ್ರಸಾಧ ವಿತರಣೆ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಭಕ್ತರು ದೂರವಾಣಿ ಸಂಖ್ಯೆ 94486 68444, 94489 44226 ಸಂಪರ್ಕಿಸಲು ಕೋರಿದೆ.

### ಉತ್ತರ ರಾಜ್ಯಗಳಲ್ಲಿ ಬಿಜೆಪಿ ಗೆಲುವು ಪಟಾಕಿ ಸಿಡಿಸಿ ಕಾರ್ಯಕರ್ತರ ಸಂಭ್ರಮ



» ಹಿರಿಯೂರು

ಉತ್ತರ ರಾಜ್ಯಗಳಲ್ಲಿ ನಡೆದ ಚುನಾವಣೆಯಲ್ಲಿ ಮಧ್ಯಪ್ರದೇಶ, ರಾಜಸ್ತಾನ್, ಹಾಗೂ ಛತ್ತೀಸ್ ಘಡ್ ರಾಜ್ಯಗಳಲ್ಲಿ ಬಿಜೆಪಿ ಪಕ್ಷವು ಅಭೂತಪೂರ್ವ ಗೆಲುವು ಸಾಧಿಸಿರುವ ಹಿನ್ನೆಲೆಯಲ್ಲಿ ನಗರದ ಗಾಂಧೀಸರ್ಕಲ್ ನಲ್ಲಿ ಹಿರಿಯೂರು ವಿಧಾನಸಭಾ ಕ್ಷೇತ್ರದ ಬಿಜೆಪಿ ಆಕಾಂಕ್ಷಿ ಅಭ್ಯರ್ಥಿ ಎನ್.ಆರ್.ಲಕ್ಷ್ಮೀಕಾಂತ್ ರವರ ನೇತೃತ್ವದಲ್ಲಿ ಬಿಜೆಪಿ ಪಕ್ಷದ ಕಾರ್ಯಕರ್ತರು ಕುಣಿದು, ಕುಪ್ಪಳಿಸಿ, ಪಟಾಕಿ ಸಿಡಿಸಿ, ಸಂಭ್ರಮಾಚರಣೆಯನ್ನು ಮಾಡಿದರು.ಈ ಕುರಿತು ಮಾತನಾಡಿದ ಎನ್.ಆರ್.ಲಕ್ಷ್ಮೀಕಾಂತ್ ಈ ಚುನಾವಣೆ ಬಿಜೆಪಿ ಪಕ್ಷದ ಜನಪರ ಆಡಳಿತವನ್ನು ದೇಶದ ಜನರು ಒಪ್ಪಿಕೊಂಡಿದ್ದಾರೆ ಎಂಬುದನ್ನು ಈ ಮಧ್ಯಪ್ರದೇಶ, ರಾಜಸ್ತಾನ್, ಹಾಗೂ ಛತ್ತೀಸ್ ಗಡ ರಾಜ್ಯಗಳ ಚುನಾವಣೆಯ ಫಲಿತಾಂಶವು ಒತ್ತಿ ಹೇಳುತ್ತಿದೆ, ಜನರ ಶ್ರೇಯೋಭಿವೃದ್ಧಿಯೇ ನಮ್ಮ ಬಿಜೆಪಿ ಸರ್ಕಾರದ ಮೂಲಮಂತ್ರವಾಗಿದೆ ಎಂಬುದಾಗಿ ಹರ್ಷ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಅಧ್ಯಕ್ಷರಾದ ವಿಶ್ವನಾಥ್, ಮುಖಂಡರಾದ ಎನ್.ಆರ್.ಲಕ್ಷ್ಮೀಕಾಂತ್, ಎಂ.ಎಸ್.ರಾಘವೇಂದ್ರ, ಎಂ.ವಿ.ಹರ್ಷಾ, ಎಸ್.ಎಲ್.ಎನ್. ವೆಂಕಟೇಶ್, ಚಂದ್ರಹಾಸ್, ನಾಗೇಂದ್ರಪ್ಪ, ಕಂಪ್ಯೂಟರ್ ಮುರುಳಿ, ಕೇಶವಮೂರ್ತಿ ಉಪಸ್ಥಿತರಿದ್ದರು.

# ಅಕ್ರಮ ಗಣಿಗಾರಿಕೆ ಪ್ರದೇಶಕ್ಕೆ ಅಧಿಕಾರಿಗಳ ತಂಡ ಭೇಟಿ

» ಪರಶುರಾಂಪುರ



ನಮ್ಮಜನ ವಿಶೇಷ

ಪರಶುರಾಂಪುರ ಹೋಬಳಿ ವ್ಯಾಪ್ತಿಯ ಚನ್ನಮ್ಮನಾಗತಿಹಳ್ಳಿ ಗ್ರಾಪಂ ಯ ಪುರ್ಲಹಳ್ಳಿ ಗ್ರಾಮದ 77/*/4 ಸರ್ವೆ ನಂ ಜಮೀನಿನಲ್ಲಿ ಕ್ವಾರೆಂಡ ಎಂಬ ಅದಿರಿಗಾಗಿ ಅಕ್ರಮವಾಗಿ ಗಣಿಗಾರಿಕೆ ಮಾಡುತ್ತಿರುವುದು ಬೆಳಕಿಗೆ ಬಂದಿದ್ದು ಸೋಮವಾರ ಗಣಿ ಮತ್ತು ಭೂವಿಜ್ಞಾನ ,ಕಂದಾಯ , ಪೊಲೀಸ್ ಇಲಾಖೆಯ ತಂಡ ಸ್ಥಳ ಪರಿಶೀಲಿಸಿತು.

ಸಾರ್ವಜನಿಕರಿಂದ ದೂರು ಬಂದ ಹಿನ್ನೆಲೆಯಲ್ಲಿ ಪಿಆರ್ ಪುರ ಪಿಎಸ್ಐ ಬಸವರಾಜ ಮತ್ತು ತಂಡದವರು ಭಾನುವಾರ ಸ್ಥಳಕ್ಕೆ ಭೇಟಿ ನೀಡಿ ಗಣಿಗಾರಿಕೆ ನಿಲ್ಲಿಸಿದ್ದರು.ಬಳಿಕ ಸೋಮವಾರ ಜಿಲ್ಲಾ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿ ಸಿ.ಎಚ್ ರೂಪ , ಪಿಎಸ್ಐ ಬಸವರಾಜು , ಕಂದಾಯ ನಿರೀಕ್ಷಕ ರಾಜೇಶ್ , ವಿಎ ಸರಸ್ವತಿ ಸ್ಥಳಕ್ಕೆ ಭೇಟಿ ನೀಡಿದಾಗ ಮಣ್ಣು ಮತ್ತು ಕಲ್ಲು ಅಗೆದಿರುವುದು ಕಂಡುಬಂದಿದೆ.

ರಾಘವೇಂದ್ರ , ಸುರೇಶ ಸೇರಿದಂತೆ ಒಟ್ಟು ಐದು ಮಂದಿಗೆ ಸೇರಿದ ಜಂಟಿ ಖಾತೆಯ ಪಟ್ಟೆಯ ಜಮೀನಿನಲ್ಲಿ ಅನುಮತಿ ಪಡೆಯದೆ ಅಕ್ರಮ ಗಣಿಗಾರಿಕೆ ನಡೆಯುತ್ತಿದ್ದು.ಸಂದರ್ಭದಲ್ಲಿ ಒಂದು ಇಟಾಚಿ ಹಾಗೂ ಒಂದು ಓಮಿನಿ ಕಾರನ್ನ ಜತೆಗೆ 10ರಿಂದ ಹದಿನೈದು ಕೆಜಿ ಕ್ವಾರಂಡ ವಶಕ್ಕೆ ಪಡೆದರು. ಈ ಕುರಿತು ಸೂಕ್ತ ವರದಿಯನ್ನು ಮುಂದಿನ ಕಾನೂನು ಕ್ರಮಕ್ಕೆ ಮೇಲಾಧಿಕಾರಿಗಳಿಗೆ ಸಲ್ಲಿಸಲಾಗುವುದು ಎಂದು ಸಂಬಂಧಪಟ್ಟವರು ತಿಳಿಸಿದ್ದಾರೆ.

## ಅಪರೂಪದ ಕ್ವಾರೆಂಡ ಅದಿರು ಪತ್ತೆ





ಬಂಗಾರದ ಆಭರಣಗಳ ಅಲಂಕಾರಕ್ಕೆ ಬಳಸುವಂತಹ ಕ್ವಾರೆಂಡ ಎಂಬ ಅದಿರು ಪತ್ತೆಯಾಗಿದ್ದು ,ಇದು ಕರ್ನಾಟಕ ರಾಜ್ಯದಲ್ಲಿ ಎಲ್ಲೂ ಈತರ ಅದಿರು ಪತ್ತೆಯಾಗಿರುವುದ ಕಂಡು ಬಂದಿಲ್ಲ , ವಿವಿಧೆಡೆ ರಾಜ್ಯಗಳಲ್ಲಿ ಅಲ್ಲಲ್ಲಿ ಕಂಡು ಬರುತ್ತಿದೆ ಎಂಬುದನ್ನು ಇಲ್ಲಿ ಗಮನಿಸಬಹುದು. ಮಾಲೀಕ ರಾಘವೇಂದ್ರ ಮಡಿಕೇರಿ ಮೂಲದ ವ್ಯಕ್ತಿಗಳಿಗೆ ಯಾವುದೇ ಅನುಮತಿ ಪಡೆಯದೆ ಅಕ್ರಮವಾಗಿ ಗಣಿಗಾರಿಕೆಗೆ ಕುಮ್ಮಕ್ಕು ನೀಡಿದ್ದಾನೆ. ಉತ್ತಮವಾಗಿ ಪಾಲಿಸ್ ಮಾಡಿದ ಕ್ವಾರೆಂಡ ಪ್ರತಿ ಕೆಜಿಗೆ ಏಳರಿಂದ ಒಂಬತ್ತು ಸಾವಿರದ ವರೆಗೆ ಬೆಲೆ ಇದೆ ಎಂಬ ಬಿಸಿ ಬಿಸಿ ಸುದ್ದಿ ಸುತ್ತಾ ಮುತ್ತಾ ಗ್ರಾಮಗಳ ಜನರಲ್ಲಿ ಹರಿದಾಡುತ್ತಿದೆ.

## ಪತ್ರಕರ್ತರಿಗೆ ಅಡ್ಡಿ ಪಡಿಸಿದ ಮಾಲಿಕ


ಅಕ್ರಮ ಗಣಿಗಾರಿಕೆ ಸ್ಥಳಕ್ಕೆ ಅಧಿಕಾರಿಗಳ ಜತೆ ತೆರಳಿದ ಪತ್ರಕರ್ತರಿಗೆ ಜಮೀನು ಮಾಲಿಕ ನನ್ನ ರ್ಮಿಷನ್ ಇಲ್ಲದೆ ಪೋಟೋ, ವಿಡಿಯೋ ತೆಗೆಯುವ ಆಗಿಲ್ಲ ಎಂದು ಅಡ್ಡಿಪಡಿಸಿದರ ಈ ವೇಳೆ ಸ್ಥಳದಲ್ಲಿದ್ದ ಪಿಎಸ್ಐ ಬಸವರಾಜು ನೀನು ಅನುಮತಿ ಪಡೆದು ಗಣಿಗಾರಿಕೆ ನಡೆಸುತ್ತೀಯಾ ಎಂದು ಗದರಿಸಿ ಅನುವು ಮಾಡಿಕೊಟ್ಟರು.

## ಪಂಚರಾಜ್ಯ ಫಲಿತಾಂಶ: 3ರಲ್ಲಿ ಬಿಜೆಪಿ ಗೆಲುವು

# ಲೋಕ ಚುನಾವಣೆಗೆ ದಿಕ್ಸೂಚಿ

### ಮಾಜಿ ಶಾಸಕ ತಿಪ್ಪಾರೆಡ್ಡಿ ಹೇಳಿಕೆ –ಬಿಜೆಪಿ ಕಾರ್ಯಕರ್ತರ ಸಂಭ್ರಮಾಚರಣೆ

» ಚಿತ್ರದುರ್ಗ



ಪಂಚ ರಾಜ್ಯ ಚುನಾವಣೆಯಲ್ಲಿ 3 ರಾಜ್ಯಗಳಲ್ಲಿ ಬಿಜೆಪಿಯ ಅಭೂತಪೂರ್ವ ವಿಜಯದ ಹಿನ್ನೆಲೆಯಲ್ಲಿ ಇಂದು ಮುಂದಿನ ಲೋಕಸಭಾ ಚುನಾವಣೆಗೆ ದಿಕ್ಸೂಚಿಯಾಗಲಿದೆ ಎಂದು ಮಾಜಿ ಶಾಸಕರಾದ ಜಿ.ಎಚ್.ತಿಪ್ಪಾರೆಡ್ಡಿಯವರು ತಿಳಿಸಿದರು.

ಪಂಚ ರಾಜ್ಯ ಚುನಾವಣೆಯಲ್ಲಿ 3 ರಾಜ್ಯಗಳಲ್ಲಿ ಬಿಜೆಪಿಯ ಅಭೂತಪೂರ್ವ ವಿಜಯದ ಹಿನ್ನೆಲೆಯಲ್ಲಿ ಭಾರತೀಯ ಜನತಾ ಪಾರ್ಟಿ ನಗರದ ಗಾಂಧಿ ವೃತ್ತದಲ್ಲಿ ಸೋಮವಾರ ಪಟಾಕಿ ಸಿಡಿಸಿ ಕಾರ್ಯಕರ್ತರಿಗೆ ಸಿಹಿ ವಿತರಿಸಿ ವಿಜಯೋತ್ಸವ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಶಾಸಕರಾದ ಜಿ.ಎಚ್. ತಿಪ್ಪಾರೆಡ್ಡಿಯವರು, ಪಂಚ ರಾಜ್ಯ ಚುನಾವಣೆಯಲ್ಲಿ 3 ರಾಜ್ಯಗಳಲ್ಲಿ ಬಿಜೆಪಿಯ ಅಭೂತಪೂರ್ವ ವಿಜಯದ ಅದರಲ್ಲಿ ಮಧ್ಯ ಪ್ರದೇಶದಲ್ಲಿ ನಾಲ್ಕು ಬಾರಿ ಮುಖ್ಯಮಂತ್ರಿಯಾಗಿದ್ದ ಶಿವರಾಜ್ ಚವಾಣ್ಣರವರು ಈ ಬಾರಿ ಅತಿ ಹೆಚ್ಚಿನ ಸೀಟುಗಳನ್ನು ಗೆಲುವುದರ ಮೂಲಕ ರಾಜ್ಯದಲ್ಲಿ ಬಿಜೆಪಿಯನ್ನು ಮೋದಿಯವರ ನೇತೃತ್ವದಲ್ಲಿ ಅಧಿಕಾರಕ್ಕೆ ತಂದಿದ್ದಾರೆ. ಛತ್ತಿಸ್‌ಗಢ ರಾಜಾಸ್ಥಾನದಲ್ಲಿಯೂ ಸಹಾ ಬಿಜೆಪಿ ಜಯ ಭೇರಿಯನ್ನು ಸಾಧಿಸಿದೆ. ಮೋದಿಯವರ ನೇತೃತ್ವದಲ್ಲಿ ಜಯವನ್ನು ಗಳಿಸಲಾಗಿದೆ. ಇದು ಪ್ರಪಂಚದ ಮುಂದುವರೆದ ರಾಷ್ಟ್ರಗಳು ಭಾರತ ಮುಂದಿನ ದಿನಮಾನದಲ್ಲಿ ಅರ್ಥಿಕ ವಾಗಿ ಅಭೀವೃದ್ದಿಯಾಗುತ್ತದೆ ಎಂಬ ಸಂದೇಶವನ್ನು ರವಾನಿಸಲಾಗಿದೆ. ಇದ ರಿಂದ ನಮ್ಮ ದೇಶದಲ್ಲಿ ಭಂಡವಾಳವನ್ನು ಹೊಡುವವರಿಗೆ ಆಕರ್ಷಣೆಯಾಗಿದೆ. ಮೋದಿಯವರು ದೇಶದ ಅಭೀವೃದ್ದಿಯ ಹರಿಕಾರಎಲು ದೇಶ ಪ್ರೇಮಿಯಾಗಿದ್ದಾರೆ ಎಂದು ಪ್ರಪಂಚದಲ್ಲಿ ಸಾಬೀತಾಗಿದೆ ಎಂದರು.


ಪುಟ ↘ 2


# ಬೈಕ್‌ಗೆ ಕಾರ್ ಡಿಕ್ಕಿ, ಬೈಕ್ ಸವಾರನ ಸ್ಥಿತಿ ಗಂಭೀರ

» ಮೊಳಕಾಲ್ಮುರು

ಚಲಿಸುತ್ತಿದ್ದ ಬೈಕ್ ಗೆ ವೇಗವಾಗಿ ಬಂದು ಕಾರು ಗುದ್ದಿದ ಪರಿಣಾಮ ಬೈಕ್ ಸವಾರನಿಗೆ ಗಂಭೀರವಾಗಿ ಗಾಯವಾಗಿರುವ ಘಟನೆಯು ಕೆಳಗಳಹಟ್ಟಿ ಗ್ರಾಮ ಸಮೀಪದ ರಾಷ್ಟ್ರೀಯ ಹೆದ್ದಾರಿಯಲ್ಲಿ ಇಂದು ಬೆಳಿಗ್ಗೆ ನಡೆದಿದೆ.

ಬೈಕ್ ಸವಾರರನು ರಾಷ್ಟ್ರೀಯ ಹೆದ್ದಾರಿಯ ಕೆಳಗಳಹಟ್ಟಿ ಗ್ರಾಮದ ಬಳಿ ತನ್ನ ಬೈಕ್ ನ್ನು ಯು ಟರ್ನ್ ತೆಗೆದುಕೊಳ್ಳುವಾಗ ಬಳ್ಳಾರಿಯಿಂದ ಚಳ್ಳಕೆರೆಗೆ ಹೋಗುತ್ತಿದ್ದ ಕಾರೊಂದು ವೇಗವಾಗಿ ಬಂದು ಬೈಕಿಗೆ ಡಿಕ್ಕಿ ಹೊಡೆದಿದೆ,ಅಪಘಾತದಲ್ಲಿಗಾಯಗೊಂಡಿದ್ದ ಯುವಕನು ಭಟ್ರಹಳ್ಳಿ ಗ್ರಾಮದ 22 ವರ್ಷದ ವಿರುಪಾಕ್ಷಿ ಎನ್ನಲಾಗಿದ್ದು,ಘಟನೆಯಲ್ಲಿ ಗಾಯಗೊಂಡಿದ್ದ ಬೈಕ್ ಸವಾರನನ್ನು ಮೊಳಕಾಲ್ಮೂರು ಪಟ್ಟಣದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಪ್ರಾಥಮಿಕ ಚಿಕಿತ್ಸೆ ನೀಡಿ ನಂತರ ಹೆಚ್ಚಿನ ಚಿಕಿತ್ಸೆಗಾಗಿ ಬಳ್ಳಾರಿಯ ವಿಮ್ಸ್ ಆಸ್ಪತ್ರೆಗೆ ಕಳುಹಿಸಲಾಗಿದೆ. ಮೊಳಕಾಲ್ಮೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ಜರುಗಿದೆ.

**ಪ್ರಮುಖ ಸುದ್ದಿ**

# ನಮ್ಮ ಸರ್ಕಾರ ಕನ್ನಡ ಬಳಕೆ ಕಡ್ಡಾಯಗೊಳಿಸಿದೆ

» ಹಿರಿಯೂರು



ಕನ್ನಡನಾಡಿನಲ್ಲಿ ಕನ್ನಡಿಗರಿಗಿಂತ ಬೇರೆ ಭಾಷೆಯನ್ನು ಮಾತನಾಡುವ ಜನರೇ ಹೆಚ್ಚಾಗಿದ್ದು, ಕನ್ನಡಿಗರೇ ಇಲ್ಲಿ ಅಲ್ಪಸಂಖ್ಯಾತರಾಗುತ್ತಿದ್ದಾರೆ, ಕನ್ನಡನಾಡಿನಲ್ಲಿ ವಾಸಿಸುತ್ತಿರುವ ಬೇರೆ ಭಾಷೆಯ ಜನರೂ ಸಹ ಕನ್ನಡ ಭಾಷೆಯನ್ನ ಕಲಿತು, ಕನ್ನಡದಲ್ಲೇ ವ್ಯವಹಾರ ಮಾಡುವ ಮೂಲಕ ಕನ್ನಡನಾಡಿನ ಕನ್ನಡ ಭಾಷೆಯನ್ನ ಉಳಿಸಿ, ಬೆಳೆಸಬೇಕಿದೆ ಎಂಬುದಾಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಹೇಳಿದರು.

ನಗರದ ಜಾಮಿಯಾ ಸರ್ಕಲ್ ನಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಹಾಗೂ ಜಾಮಿಯಾ ಸರ್ಕಲ್ ಘಟಕದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 68 ನೇ ಕನ್ನಡ ರಾಜ್ಯೋತ್ಸವ ಹಾಗೂ ಈ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಕನ್ನಡದಲ್ಲಿ 125 ಕ್ಕೆ 125 ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ನಮ್ಮ ಕಾಂಗ್ರೆಸ್ ಸರ್ಕಾರ ಚುನಾವಣೆಯಲ್ಲಿ ಘೋಷಿಸಿದಂತೆ ರಾಜ್ಯದ ಜನರಿಗೆ 4 ಗ್ಯಾರೆಂಟಿಗಳನ್ನು ಜಾರಿಗೆ ತರುವ ಮೂಲಕ ನುಡಿದಂತೆ ನಡೆದುಕೊಂಡ ಸರ್ಕಾರವಾಗಿದ್ದು, ಜೊತೆಗೆ ಕನ್ನಡನಾಡಿನಲ್ಲಿ ಕನ್ನಡ ಭಾಷೆಯ ಉಳಿವಿಗಾಗಿ ಆಡಳಿತದಲ್ಲಿಯೂ ಕನ್ನಡಭಾಷೆಯನ್ನೇ ಬಳಕೆ ಮಾಡಬೇಕು ಎಂಬುದನ್ನು ಕಟ್ಟುನಿಟ್ಟಾಗಿ ಜಾರಿಗೆ ತರುತ್ತಿದೆ ಎಂಬುದಾಗಿ ಅವರು ಹೇಳಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ವಹಿಸಿದ್ದ ಕೋಡಿಹಳ್ಳಿ ಆದಿಜಾಂಬವ ಮಹಾಸಂಸ್ಥಾನಮಠ ಶ್ರೀಶ್ರೀಷಡಕ್ಷರಿಮುನಿ ದೇಶೀಕೇಂದ್ರ ಸ್ವಾಮೀಜಿ ಮಾತನಾಡಿ, ನಮ್ಮ ಕನ್ನಡ ಭಾಷೆಗೆ ಸುಮಾರು 2000 ವರ್ಷಗಳ ಇತಿಹಾಸವಿದ್ದು, 8 ಜ್ಞಾನಪೀಠ ಪ್ರಶಸ್ತಿಗಳನ್ನು ಪಡೆದಿದೆ, ಇಂತಹ ಕನ್ನಡ ಭಾಷೆಯನ್ನು ಉಳಿಸಿ, ಬೆಳೆಸುವ ಜವಾಬ್ದಾರಿ ನಾಡಿನ ಪ್ರತಿಯೊಬ್ಬ ನಾಗರೀಕರ ಜವಾಬ್ದಾರಿಯಾಗಿದೆ ಎಂಬುದಾಗಿ ಅವರು ಹೇಳಿದರು.

ಇದೇ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ವಾಣಿವಿಲಾಸ ಸಾಗರ ಜಲಾಶಯದ ನಿರ್ಮಾತೃ ನಾಲ್ವಡಿ ಕೃಷ್ಣರಾಜ್ ಒಡೆಯರ್, ಕರ್ನಾಟಕರತ್ನ ಪುನೀತ್ ರಾಜ್ ಕುಮಾರ್, ರಾಷ್ಟ್ರಕವಿ ಕುವೆಂಪು, ಇವರುಗಳ ಪ್ರತಿಮೆ ಅನಾವರಣಕ್ಕೆ ಕರವೇ ಕಾರ್ಯಕರ್ತರು ಮನವಿ ಮಾಡಿದರು.

ಮನವಿಗೆ ಸ್ಪಂದಿಸಿದ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ರವರು ಪ್ರತಿಮೆ ಅನಾವರಣಕ್ಕೆ ಸೂಕ್ತ ಸ್ಥಳ ಸಿಕ್ಕ ಕೂಡಲೇ ದೇಶದ ಮಹಾನ್ ಚೇತನಗಳಾದ ವಾಣಿವಿಲಾಸ ಸಾಗರ ಜಲಾಶಯದ ನಿರ್ಮಾತೃ ನಾಲ್ವಡಿ ಕೃಷ್ಣರಾಜ್ ಒಡೆಯರ್, ಕರ್ನಾಟಕರತ್ನ ಪುನೀತ್ ರಾಜ್ ಕುಮಾರ್, ರಾಷ್ಟ್ರಕವಿ ಕುವೆಂಪು, ಇವರುಗಳ ಪ್ರತಿಮೆಯನ್ನು ಅನಾವರಣ ಮಾಡಲಾಗುವುದು ಎಂಬುದಾಗಿ ಭರವಸೆ ನೀಡಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಾಮಿಯಾ ಸರ್ಕಲ್ ಘಟಕದ ಅಧ್ಯಕ್ಷರಾದ ರಫೀಕ್ ವಹಿಸಿದ್ದರು. ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ತಿಪ್ಪೇಸ್ವಾಮಿ, ನಗರಸಭೆ ಪೌರಾಯುಕ್ತರಾದ ಮಹಂತೇಶ್, ಚಿತ್ರದುರ್ಗ ಜಿಲ್ಲಾ ಅಧ್ಯಕ್ಷರಾದ ಟಿ.ರಮೇಶ್, ಬೆಂಗಳೂರು ಕರವೇ ರಾಜ್ಯ ರೈತ ಘಟಕ ಅಧ್ಯಕ್ಷರಾದ ಕಾಂತರಾಜ್, ತುಮಕೂರು ಜಿಲ್ಲಾ ಅಧ್ಯಕ್ಷರಾದ ಮಂಜುನಾಥ್ ಗೌಡರು, ದಾವಣಗೆರೆ ಜಿಲ್ಲಾ ಅಧ್ಯಕ್ಷರಾದ ರಾಮೇಗೌಡ್ರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಲೋಕ ಚುನಾವಣೆಗೆ ದಿಕ್ಸೂಚಿ: ತಿಪ್ಪಾರೆಡ್ಡಿ

» ಮೊದಲ ಪುಟದಿಂದ

ಕಾಂಗ್ರೇಸ್‌ನವರು ಕರ್ನಾಟಕದಲ್ಲಿ ನೀಡಿದಂತೆ ಅಲ್ಲಿಯೂ ಸಹಾ ಗ್ಯಾರೆಂಟಿಗಳನ್ನು ನೀಡಿದ ಆದರೂ ಸಹಾ ಅಲ್ಲಿನ ಮತದಾರರು ಅದನ್ನು ತಿರಸ್ಕಾರ ಮಾಡುವುದರ ಮೂಲಕ ಮೋದಿಯವರ ಸ್ವಚ್ಛವಾದ ಆಡಳಿತವನ್ನು ನೋಡಿ ಮತವನ್ನು ನೀಡಿದ್ದಾರೆ. ಈ ಮೂರು ರಾಜ್ಯಗಳಲ್ಲಿ ಬಿಜೆಪಿ ಜಯ ಬೇರಿಯನ್ನು ಸಾಧಿಸಿದ್ದನ್ನು ನೋಡಿದರೆ ಮುಂದಿನ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಮತ್ತು ಎನ್‌ಡಿ.ಎ. 400 ಸ್ಥಾನಗಳನ್ನು ಗೆಲ್ಲುವುದರಲ್ಲಿ ಆಶ್ಚರ್ಯ ಇಲ್ಲ ಮತ್ತೆ ಮೋದಿಯವರೆ ದೇಶದ ಪ್ರಧಾನ ಮಂತ್ರಿಗಳಾಗಲಿದ್ದಾರೆ. ಪ್ರಪಂಚದಲ್ಲಿ ಭಾರತವನ್ನು ಬಲಿಷ್ಠ ದೇಶವನ್ನಾಗಿ ಮಾಡಲಾಗುವುದು ಅಲ್ಲದೆ ಆರ್ಥಿಕವಾಗಿಯೂ ಸಹಾ ದೇಶವನ್ನು ಸದೃಢವಾಗಿ ಮಾಡಲಾಗುವುದು ಇದು ದಿಕ್ಸೂಚಿಯಾಗಲಿದೆ ಎಂದ ತಿಪ್ಪಾರೆಡ್ಡಿಯವರು, ಈ ಮೂರು ರಾಜ್ಯದಲ್ಲಿ ಶೇ.48 ರಷ್ಟು ಮತವನ್ನು ನೀಡಿದ್ದಾರೆ. ಮೋದಿಯವರನ್ನು ಪ್ರಪಂಚದ ನಾಯಕ ಎಂದು ಅಲ್ಲಿನ ಮತದಾರರು ತೋರಿಸಿದ್ದಾರೆ. ಇದು ಬಿಜೆಪಿ ವಿಜಯೋತ್ಸವವಲ್ಲ ಮನೆ ಮನೆಗಳಲ್ಲಿಯ ಸಹಾ ವಿಜಯೋತ್ಸವನ್ನು ಆಚರಣೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರಾದ ಎ ಮುರಳಿ, ನಗರ ಅದ್ಯಕ್ಷರಾದ ನವೀನ್ ಚಾಲುಕ್ಯ, ಮಾಜಿ ಜಿಲಾದ್ಯಕ್ಷರಾದ ನರೇಂದ್ರನಾಥ್, ಎಸ್‌ಆರ್ ಗಿರೀಶ್, ಸಂಪತ್ ಕುಮಾರ್, ಡಿ, ಕೆ ,ಜಯ್ಯಣ್ಣ ,ಶಿವಣ್ಣಚಾರ್ ,ಭಾರ್ಗವೀ, ದಗ್ಗೆ ಶಿವಪ್ರಕಾಶ, ನಾಗರಾಜ ಬೇದ್ರೆ, ನಂದಿ ನಾಗರಾಜ, ಚಂದ್ರು, ತಿಪ್ಪೇಸ್ವಾಮಿ,, ದ್ರಾವೀಡ್ ರೇಖಾ, ಬಸಮ್ಮ ,ತಿಮ್ಮಣ್ಣ, ಶಾಂತಮ್ಮ, ಶಂಭು, ಕೃಷ್ಣ, ಯಶವಂತ್, ಪ್ರಶಾಂತ್ , ಚಂದ್ರಕಾ ಲೋಕನಾಥ್, ಕವನ ಶ್ಯಾಮಲಾ ಶಿವಪ್ರಕಾಶ್ ವೀಣಾ, ಅರುಣಾ ಪ್ರಸನ್ನ, ಕಮಲೇಶ ಅನೂಸುಯಮ್ಮ ಸೇರಿದಂತೆ ಪಧಾದಿಕಾರಿಗಳು ಉಪಸ್ಥಿತಿ ಇದ್ದರು.

### ಒಕ್ಕೂಟಗಳ ಪದಗ್ರಹಣ ಸಮಾರಂಭಕ್ಕೆ ಇನ್ಸ್‌ಪೆಕ್ಟರ್ ಮುದ್ದುರಾಜ್ ಚಾಲನೆ



» ಚಿತ್ರದುರ್ಗ

ಮಹಿಳೆಯರುಆರ್ಥಿಕವಾಗಿಸಬಲೀಕರಣಗೊಳ್ಳುವ ಮೂಲಕ ಸ್ವಾವಲಂಬಿ ಬದುಕು ಕಟ್ಟಿಕೊಳ್ಳುವಂತೆ ಗ್ರಾಮಾಂತರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಮುದ್ದುರಾಜ್ ವೈ. ತಿಳಿಸಿದರು.ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್, ಮಲ್ಲಾಪುರ ನಗರ ಬಿ.ವಲಯ, ಪ್ರಗತಿ ಬಂಧು ಸ್ವಸಹಾಯ ಸಂಘಗಳ ಒಕ್ಕೂಟ. ಮಲ್ಲಾಪುರ, ಪಿಳ್ಳೆಕೆರನಹಳ್ಳಿ ಇವುಗಳ ಸಹಯೋಗದೊಂದಿಗೆ ಮಲ್ಲಾಪುರದಲ್ಲಿರುವ ಆಂಜನೇಯಸ್ವಾಮಿ ದೇವಸ್ಥಾನದ ಆವರಣದಲ್ಲಿ ಇತ್ತೀಚೆಗೆ ನಡೆದ ಸಾಮೂಹಿಕ ನವಗ್ರಹ ಪೂಜೆ ಹಾಗೂ ಒಕ್ಕೂಟಗಳ ಪದಗ್ರಹಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಗ್ರಾಮೀಣ ಭಾಗದ ಮಹಿಳೆಯರಿಗೆ ಸ್ವಸಹಾಯ ಸಂಘಗಳ ಮೂಲಕ ಹತ್ತು ಹಲವಾರು ಯೋಜನೆಗಳನ್ನು ಹಮ್ಮಿಕೊಳ್ಳುತ್ತಾ ಬರುತ್ತಿರುವುದು ನಿಜಕ್ಕೂ ಸಂತೋಷದ ಸಂಗತಿ. ಮಹಿಳೆಯರು ಇದರ ಸದುಪಯೋಗಪಡೆದುಕೊಂಡು ಆರ್ಥಿಕವಾಗಿ ಬಲಶಾಲಿಗಳಾಗಬೇಕೆಂದುಹೇಳಿದರು.ಗೋನೂರು ಗ್ರಾಮಪಂಚಾಯತ್ಅಭಿವೃದ್ಧಿಅಧಿಕಾರಿಎರ್ರಿಸ್ವಾಮಿ ಕಿಟ್‌ಗಳನ್ನು ವಿತರಿಸಿ ಮಾತನಾಡಿದರು.ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಿಲ್ಲಾ ನಿರ್ದೇಶಕ ದಿನೇಶ್, ಜಿಲ್ಲಾ ಜನಜಾಗೃತಿ ವೇದಿಕೆ ಉಪಾಧ್ಯಕ್ಷ ಕೆ.ಆರ್.ಮಂಜುನಾಥ್, ಶ್ರೀಮತಿ ಗೀತ, ಶ್ರೀಮತಿ ಎಂ.ಕೆ.ಸಾವಿತ್ರಮ್ಮ, ಗಿರೀಶ್ ಬಿ. ತಾಲ್ಲೂಕು ಯೋಜನಾಧಿಕಾರಿ ಅಶೋಕ್ ಬಿ. ಗ್ರಾಮ ಪಂಚಾಯಿತಿ ಸದಸ್ಯರು, ಮಲ್ಲಾಪುರ ಗ್ರಾಮದ ಹಿರಿಯರು ವೇದಿಕೆಯಲ್ಲಿದ್ದರು.

### ಡಿ.07ರಂದು ಜಿಲ್ಲಾ ಮಟ್ಟದ ಯುವಜನೋತ್ಸವ ಸ್ಪರ್ಧೆ

» ಚಿತ್ರದುರ್ಗ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ 2023-24ನೇ ಸಾಲಿನ ಚಿತ್ರದುರ್ಗ ಜಿಲ್ಲಾಮಟ್ಟದ ಯುವಜನೋತ್ಸವ ಆಯ್ಕೆ ಸ್ಪರ್ಧೆಯನ್ನು ಇದೇ ಡಿಸೆಂಬರ್ 7ರಂದು ಬೆಳಿಗ್ಗೆ 10.30ಕ್ಕೆ ನಗರದ ಸರ್ಕಾರಿ ಕಲಾ ಕಾಲೇಜು (ಸ್ವಾಯತ್ತ) ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಈ ಸ್ಪರ್ಧೆಯಲ್ಲಿ ಭಾಗವಹಿಸುವವರು 15 ರಿಂದ 29 ವರ್ಷ ಒಳಗಿನವರಾಗಿದ್ದು, ಕಡ್ಡಾಯವಾಗಿ ಜನ್ಮ ದಿನಾಂಕ ದಾಖಲೆಯೊಂದಿಗೆ (ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ ಜನ್ಮದಿನಾಂಕ ದೃಢೀಕರಣ ಪತ್ರ) ಭಾಗವಹಿಸಬಹುದು. ದಾಖಲೆಗಳನ್ನು ತರದೇ ಇರುವವರಿಗೆ ಸ್ಪರ್ಧೆಗಳಲ್ಲಿ ಭಾಗವಹಿಸಲು ಅವಕಾಶ ನೀಡಲಾಗುವುದಿಲ್ಲ. ಚಿತ್ರದುರ್ಗ ಜಿಲ್ಲೆಯಲ್ಲಿ ವಾಸವಾಗಿರುವವರು ಮಾತ್ರ ಭಾಗವಹಿಸಲು ಅವಕಾಶ ಇರುತ್ತದೆ.

ಜಿಲ್ಲಾ ಮಟ್ಟದಲ್ಲಿ ವಿಜೇತರಾದವರಿಗೆ ನಗದು ಬಹುಮಾನ ನೀಡಲಾಗುವುದು, ಪ್ರಥಮ ಸ್ಥಾನ ರೂ.500, ದ್ವಿತೀಯ ಸ್ಥಾನ ರೂ.300 ಹಾಗೂ ತೃತೀಯ ಸ್ಥಾನ ರೂ. 250 ಹಾಗೂ ಪ್ರಶಸ್ತಿ ಪತ್ರ ನೀಡಲಾಗುವುದು.

# ಕನ್ನಡ ಭಾಷೆ ದಿನನಿತ್ಯ ಬಳಕೆ ಹೆಚ್ಚಾಗಲಿ

» ಚಿತ್ರದುರ್ಗ

ನಮ್ಮ ದಿನನಿತ್ಯದ ಜೀವನದಲ್ಲಿ ಕನ್ನಡ ಮತ್ತು ಕನ್ನಡ ಭಾಷಾ ಬಳಕೆಯು ಹೆಚ್ಚಾಗಬೇಕು ಎಂದು ದೇವಸಮುದ್ರ ಗ್ರಾಮ ಪಂಚಾಯತಿ ಅಧ್ಯಕ್ಷೆ ಲಕ್ಷ್ಮೀಚಂದ್ರಣ್ಣ ಹೇಳಿದರು.

ಮೊಳಕಾಲ್ಮೂರುತಾಲ್ಲೂಕಿನರಾಂಪುರದ ಇಂದಿರಾಗಾಂಧಿ ವಸತಿಯುತ ಶಾಲೆ ಸಭಾಂಗಣದಲ್ಲಿ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ. ಬೆಂಗಳೂರು, ಜಿಲ್ಲಾಡಳಿತ ಚಿತ್ರದುರ್ಗ, ಮದಕರಿನಾಯಕ ಸಾಂಸ್ಕೃತಿಕ ಕೇಂದ್ರ(ರಿ) ಚಿತ್ರದುರ್ಗ ಇವರ ಸಂಯುಕ್ತಾಶ್ರಯದಲ್ಲಿ ನಡೆದ ಗಡಿನಾಡ ಸಾಂಸ್ಕೃತಿಕ ಸಂಭ್ರಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಕನ್ನಡ ನಾಡು ನುಡಿ ಪರಂಪರೆಯನ್ನು ಉಳಿಸಿಬೆಳಸುವ ಕಾರ್ಯವನ್ನು ಪ್ರತಿಯೊಬ್ಬರು ಮಾಡಬೇಕಿದೆ ಎಂದು ಹೇಳಿದರು.ಗ್ರಾಮ ಪಂಚಾಯಿತಿ ಸದಸ್ಯ ಹೆಚ್.ಮೂರ್ತಿ ಮಾತನಾಡಿ, ಮನುಷ್ಯ ಒತ್ತಡದಿಂದ ಹೊರಬರಲು ಇಂಥಹ ಸಾಂಸ್ಕೃತಿಕ ಕಾರ್ಯಕ್ರಮಗಳು ಅವಶ್ಯಕವಾಗಿವೆ,ಗಡಿಪ್ರದೇಶಗಳಲ್ಲಿ ಕನ್ನಡ ಭಾಷೆಮತ್ತುನಮ್ಮಮೂಲಸಂಸ್ಕೃತಿಯನ್ನು ಕಾಪಾಡುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ



ಇಂಥಹ ಕಾರ್ಯಕ್ರಮಗಳನ್ನು ಆಯೋಜಿಸಿ ಕಲೆಗೆ ಪ್ರೋತ್ಸಾಹ ನೀಡುತ್ತಿರುವುದು ಶ್ಲಾಘನೀಯವಾದದು ಎಂದು ತಿಳಿಸಿದರು.ಸಂಗೀತ ಶಿಕ್ಷಕ ಕೆ.ಓ ಶಿವಣ್ಣ ಮಾತನಾಡಿ, ಸಂಗೀತಕ್ಕೆ ಮೂಲ ಜನಪದ ಈ ಹಿನ್ನೆಲೆಯಲ್ಲಿ ಜನಪದ ಕಲೆಗಳಾದ ಕೋಲಾಟ,ತಮಟೆ ವಾದನ,ಬೀಸುವಕಲ್ಲಿನ ಪದಗಳು,ಮೂಲಜನಪದ ಗೀತೆಗಳು, ಕಂಸಾಳೆ, ಗ್ರಾಮೀಣ ಸೊಗಡನ್ನು ಪ್ರತಿಬಿಂಬಿಸುವ ಸೋಬಾನೆ ಗೀತೆಗಳು,ಗೊರವರ ಕುಣಿತ, ನಂದಿಕೋಲು ಕುಣಿತ, ಜನಪದ ನೃತ್ಯ, ವೀರಗಾಸೆ, ಕಹಳೆ ವಾದನ ಮುಂತಾದ ಕಲೆಗಳು ವ್ಯಕ್ತಿಯ ವ್ಯಕ್ತಿತ್ವವನ್ನು ಉಜ್ವಲಗೊಳಿಸುತ್ತವೆ ಇಂಥಹ ವಿನೂತನವಾದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಇಲಾಖೆಯವರು ಪ್ರತೀವರ್ಷ ಆಯೋಜಿಸಿ ಸಂಘಸಂಸ್ಥೆಗಳೊಂದಿಗೆ ಯಶಸ್ವಿಯಾದ ಕಾರ್ಯಕ್ರಮಗಳನ್ನು ಮಾಡುತ್ತಾ ಕನ್ನಡ ಭಾಷೆ.ಸಂಸ್ಕೃತಿ ಮತ್ತು ಪರಂಪರೆಯನ್ನು ಉಳಿಸಿಬೆಳಸುವ ಕಾರ್ಯವನ್ನು ಮಾಡುತ್ತಿರುವುದು ಸಂತಸದ ವಿಷಯ ಎಂದು ಹೇಳಿದರು.

ಗಡಿನಾಡ ಸಾಂಸ್ಕೃತಿಕ ಸಂಭ್ರಮ ಕಾರ್ಯಕ್ರಮದಲ್ಲಿ ಎಂ.ನುಂಕೇಶ್ ಮತ್ತು ತಂಡದವರು ಸುಗಮ ಸಂಗೀತ, ಎಸ್.ಮೈಲಾರಿ ಮತ್ತು ತಂಡ-ವಚನಸಂಗೀತ,ತಿಪ್ಪೇರುದ್ರ ಮತ್ತು ತಂಡ-ತಮಟೆವಾದನ,ಲಿಖಿತಶ್ರೀ ಮತ್ತು ತಂಡ ಸಾಮೂಹಿಕ ನೃತ್ಯ ಪ್ರದರ್ಶನ, ಕನ್ನಡ ಗೀತಗಾಯನ-ಕೆ.ಓ ಶಿವಣ್ಣ ಮತ್ತು ತಂಡ. ತತ್ವಪದ-ಹಿಮಂತರಾಜ ಮತ್ತು ತಂಡ. ಜಾನಪದ ಸಂಗೀತ-ತಿಮ್ಮಣ್ಣ ಮತ್ತು ತಂಡ.ದಾಸರಪದ-ಕೆ.ಗಂಗಾಧರ ಮತ್ತು ತಂಡದವರು ಕಲಾ ಪ್ರದರ್ಶನ ನೀಡಿದರು. ಗ್ರಾ.ಪಂ.ಉಪಾಧ್ಯಕ್ಷ ಕುಮಾರಸ್ವಾಮಿ, ಸದಸ್ಯರುಗಳಾದ. ಮೂರ್ತಿ, ಪರಮೇಶ್ವರಪ್ಪ, ಮಂಜುನಾಥ,ತಿಪ್ಪೇಸ್ವಾಮಿ,ಪ್ರಾಂಶುಪಾಲ ನಾಗೇಂದ್ರಪ್ಪ,ಉಪನ್ಯಾಸಕ ಡಾ.ತಿಮ್ಮಣ್ಣ,ಬಸವರಾಜ, ವಿಜಯ ಮಹಾಂತೇಶ,ಚಂದ್ರಣ್ಣ. ಡಿ.ಎಸ್ ಎಸ್ ಗಂಗಾಧರ.ಕಲಾವಿದ ಎಂ.ನುಂಕೇಶ್, ಪ್ಯಾಡ್ ಮನೋಜ್.ಗಾಯಕ ತಿಪ್ಪೇರುದ್ರ. ಅಪಾರ ಸಂಖ್ಯೆಯ ವಿದ್ಯಾರ್ಥಿಗಳು ಹಾಜರಿದ್ದರು.

# ಡಿ.6ಕ್ಕೆ ಭೀಮ ಜ್ಞಾನ ಜ್ಯೋತಿ ನಮನ

» ಚಿತ್ರದುರ್ಗ

ಭೀಮಯಾತ್ರೆ ಬಳಗದವತಿಯಿಂದ ಭಾರತರತ್ನ ಡಾ.ಬಿ.ಆರ್ ಅಂಬೇಡ್ಕರ್‌ರವರ ಪರಿನಿರ್ವಾಣ ದಿನದ ಅಂಗವಾಗಿ ಡಿ.6ರ ಸಂಜೆ 6 ಗಂಟಗೆ ನಗರದ ಡಾ.ಬಿ.ಆರ್ ಅಂಬೇಡ್ಕರ್ ಪ್ರತಿಮೆ ಬಳಿ ಭೀಮ ಜ್ಞಾನ ಜ್ಯೋತಿ ನಮನ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದಾಗಿ ಭೀಮ ಯಾತ್ರೆ ಬಳಗ ತಿಳಿಸಿದೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ನ್ಯಾಯವಾದಿಗಳು ಬಳಗದ ಮುಖಂಡರಾದ ಈ.ಎಸ್.ರವೀಂದ್ರ ರವರು ಸಂವಿಧಾನದ ಅರಿವಿಗಾಗಿ ಮಾನವೀಯತೆಯ ಉಳಿವಿಗಾಗಿ ಬುದ್ದ ಬಸವ ಅಂಬೇಡ್ಕರ್ ತತ್ವದಡಿಯಲ್ಲಿ ಭೀಮಯಾತ್ರೆ ನಡೆಯುತ್ತಿದ್ದು, ಡಿ.6ರ ಅಂಬೇಡ್ಕರ್ ರವರ ಪರಿನಿರ್ವಾಣ ದಿನವನ್ನು ಅರ್ಥ ಪೂರ್ಣವಾಗಿ ಆಚರಣೆ ಮಾಡಲು ತೀರ್ಮಾನ ಮಾಡಲಾಗಿದ್ದು, ನಮ್ಮೆಲ್ಲರ ಬದುಕು, ಉಸಿರು, ಜೀವನವನ್ನು ನೀಡಿರುವ ಮಹಾನಾಯಕ ಅಂಬೇಡ್ಕರ್ ರವರಿಗೆ ನಮನ ಸಲ್ಲಿಸುವುದು ಅದ್ಯ ಕರ್ತವ್ಯವಾಗಿದೆ. ಪ್ರಪಂಚದ 197 ದೇಶಗಳು ಸಹಾ ಅಂಬೇಡ್ಕರ್ ರವರಿಗೆ ಈ ದಿನದಂದು ನಮನ ಸಲ್ಲಿಸುತ್ತಿದ್ದಾರೆ. ಅದರಂತೆ ಈ ಮಹಾನ್ ವ್ಯಕ್ತಿಯನ್ನು ಸ್ಮರಣೆ ಮಾಡುವುದು ಸಹಾ ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

600 ಸಾಮಂತ ಪ್ರಾಂತ್ಯಗಳನ್ನು ವಿವಿಧ



ಪ್ರದೇಶಗಳನ್ನು ವಿವಿಧ ಧರ್ಮಗಳನ್ನು ನೂರಾರು ಭಾಷೆಗಳನ್ನು ಒಟ್ಟುಗೂಡಿಸಿ ವಿವಿಧತೆಯಲ್ಲಿ ಏಕತೆಯನ್ನು ಮೂಡಿಸಿ ಭವ್ಯ ಭಾರತವನ್ನು ಪ್ರಜಾಸತಾತ್ಮಕ ಗಣರಾಜ್ಯವನ್ನಾಗಿ ರೂಪಿಸಿ ಸಂವಿಧಾನವನ್ನು ರಚಿಸಿದ ಮಹಾನ್ ಮಾನವತಾವಾದಿ ಸಂವಿಧಾನ ಶಿಲ್ಪಿ ಅಂಬೇಡ್ಕರ್ ರವರ ಪುಣ್ಯ ಸ್ಮರಣೆ ಕಾರ್ಯಕ್ರಮವೂ ಅವಿಸ್ಮರಣೀಯವಾಗಿದೆ ಎಂದ ಅವರು, ಇದರ ಅಂಗವಾಗಿ ಡಿ.6 ರ ಸಂಜೆ 6 ಗಂಟೆಗೆ ನಗರದ ಅಂಬೇಡ್ಕರ್ ಪ್ರತಿಮೆ ಬಳಿ ಭೀಮಾಯಾತ್ರೆ ಬಳಗವು ಭೀಮ ಜ್ಞಾನ ಜ್ಯೋತಿಯನ್ನು ಹಮ್ಮಿಕೊಂಡಿದೆ. ಅಂದು ವಿಶ್ವಕ್ಕೆ ಸಾರಿ ಹೇಳಲು ಭೀಮಭೀಮಾನಿಗಳು, ಬಸವಾಭಿಮಾನಿಗಳು, ಬುದ್ದಾಭಿಮಾನಿಗಳು ತಮ್ಮ ಮನೆಯಿಂದ ಮಣ್ಣಿನ ಹಣತೆಯ ಭೀಮ ಜ್ಯೋತಿಯನ್ನು ತರುವುದರ ಮೂಲಕ ಭೀಮ ಪ್ರತಿಮೆಗೆ ಬೆಳಗುವುದು ಮೂಲಕ ಪರಿನಿರ್ವಾಣ ದಿನವನ್ನು ಅರ್ಥ ಪೂರ್ಣವಾಗಿ ಆಚರಣೆ ಮಾಡಬೇಕಿದೆ ಎಂದರು. ಅಂದು ಸಂಜೆ ದೀಪಗಳೊಂದಿಗೆ ಅಂಬೇಡ್ಕರ್ ಪ್ರತಿಮೆಯಿಂದ ಸಾಗಿದ ಮೆರವಣಿಗೆಯೂ ಬಿ.ಡಿ.ರಸ್ತೆಯ ಮೂಲಕ ಸಂತೇಪೇಟೆಗೆ ಗಾಂಧಿ ವೃತ್ತ ದಾಟಿ ನಂತರ ಬಿ.ಡಿ.ರಸ್ತೆಯ ಮೂಲಕ ಮರಳಿ ಅಂಬೇಡ್ಕರ್ ಪ್ರತಿಮೆಯನ್ನಯ ತಲುಪಲಿದೆ ಎಂದು ರವೀಂದ್ರ ಹೇಳಿದರು.

ಗೋಷ್ಠಿಯಲ್ಲಿ ನ್ಯಾಯವಾದಿಗಳಾದ ಶರಣಪ್ಪ, ಈ.ಎಸ್.ರವಿಕುಮಾರ್, ಮುಖಂಡರಾದ ಡಿ.ಕುಮಾರಸ್ವಾಮಿ, ಟಿ.ಸತೀಶ್, ಆರ್.ಪ್ರಕಾಶ್, ಎಸ್.ಮಂಜಣ್ಣ, ಜೆ.ಜೆ,ಹಟ್ಟಿ ರಘು, ಕೃಷ್ಣಮೂರ್ತಿ ಹೆಚ್.ನಟರಾಜ್ ಭಾಗವಹಿಸಿದ್ದರು.

## ಮದ್ಯ ಮಾರಟ ತಡೆಯಲು ತಹಶೀಲ್ದಾರ್‌ಗೆ ಮನವಿ ಸಲ್ಲಿಕೆ



» ಮೊಳಕಾಲ್ಮುರು

ಪಟ್ಟಣದ ಕೋಟೆ ಬಡಾವಣೆಯಲ್ಲಿ ಅನಧಿಕೃತ ಮಧ್ಯ ಮಾರಾಟ ಮಾಡುವವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಸೋಮವಾರದಂದು ಬಡಾವಣೆಯ ನಿವಾಸಿಗಳು ಮನವಿ ಪತ್ರ ನೀಡಿದ್ದಾರೆ.

ಕೋಟೆ ಬಡಾವಣೆಯಲ್ಲಿ ಸಣ್ಣಪುಟ್ಟ ಅಂಗಡಿಗಳು ಸೇರಿದಂತೆ ಮನೆಗಳಲ್ಲಿ ಮಧ್ಯ ಮಾರಾಟ ಮಾಡುತ್ತಿದ್ದಾರೆ,ಇದರಿಂದಾಗಿ ಪಾನಮತ್ತರಾಗುವ ವ್ಯಸನಿಗಳು ರಾತ್ರಿ ಸಮಯದಲ್ಲಿ ವಿಪರೀತ ಗಲಾಟೆ ಮಾಡುತ್ತಿದ್ದು ನಮಗೆ ತೊಂದರೆ ಉಂಟಾಗುತ್ತದೆ ಬಡಾವಣೆಯಲ್ಲಿ ಜೀವನ ಮಾಡಲು ಕಷ್ಟವಾಗುತ್ತದೆ ಆದ್ದರಿಂದಾಗಿ ಮಧ್ಯ ಮಾರಾಟಕ್ಕೆ ಕಡಿವಾಣ ಹಾಕಬೇಕೆಂದು ಸ್ಥಳೀಯ ನಿವಾಸಿಗಳು ಪಟ್ಟಣದ ತಾಲೂಕು ಆಡಳಿತ ಸೌಧದಲ್ಲಿ ತಹಶೀಲ್ದಾರ್ ಎಂವಿ ರೂಪಾರವರಿಗೆ ಮನವಿ ಪತ್ರ ನೀಡಿದರು. ಸ್ಥಳದಲ್ಲಿ ಚಿತ್ತಕ್ಕ, ಬೊಮ್ಮಕ್ಕ,ಸಿದ್ದಕ್ಕ, ಮಾರಕ್ಕ, ಮಹಾದೇವಿ ಮಂಜಮ್ಮ, ಅನಿತಮ್ಮ, ಹನುಮಕ್ಕ ಸೇರಿದಂತೆ ಬಡಾವಣೆ ನಿವಾಸಿಗಳು ಇದ್ದರು.

# ಚಂದ್ರಾ ಲೇಔಟ್ ನಾಗರೀಕರಿಗೆ ಸೌಕರ್ಯಕ್ಕೆ ಒತ್ತಾಯ

» ಹಿರಿಯೂರು

ವೇದಾವತಿ ನಗರದ 3 ನೇ ವಾರ್ಡ್ ಚಂದ್ರಾ ಲೇ ಔಟ್ ನಿವಾಸಿಗಳಿಗೆ ಬಹು ದಿನಗಳಿಂದ ನೆನೆಗುದಿಗೆ ಬಿದ್ದಿರುವ ರಸ್ತೆ ಕಾಮಗಾರಿಯನ್ನು ತ್ವರಿತವಾಗಿ ಮುಗಿಸಿ ನಾಗರೀಕರ ಸಂಚಾರಕ್ಕೆ ಅನುವುಗೊಳಿಸಿಕೊಡಬೇಕೆಂದು ಸಾಮಾಜಿಕ ಕಾರ್ಯಕರ್ತರಾದ ಕಸವನಹಳ್ಳಿರಮೇಶ್ ಆಗ್ರಹಪೂರ್ವಕ ಒತ್ತಾಯ ಮಾಡಿದ್ದಾರೆ.

ಚಂದ್ರಾ ಲೇ ಔಟ್ ನ "ಡಾಗ್ ಸರ್ಕಲ್" ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಈಗಾಗಲೇ ಒತ್ತುವರಿ ತೆರವು ಮಾಡಿರುವ ರಸ್ತೆ ಮದ್ಯದಲ್ಲಿರುವ ವಿದ್ಯುತ್ ಮಾರ್ಗ ಮತ್ತು ಪರಿವರ್ತಕ ಸ್ಥಳಾಂತರ ಕಾಮಗಾರಿಯನ್ನು ತ್ವರಿತವಾಗಿ ಮುಗಿಸಿಕೊಡಲು ಸಂಬಂಧಿಸಿದ





ನಗರಸಭೆ ಮತ್ತು ಬೆಸ್ಕಾಂ ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ.ಈ ಭಾಗದ ನಾಗರೀಕರಿಗೆ ಸಿಸಿ ರಸ್ತೆ, ಬಾಕ್ಸ್ ಚರಂಡಿ, ಬೀದಿ ದೀಪ, ಸಮರ್ಪಕ ಕುಡಿಯುವ ನೀರಿನ ತೊಂದರೆ ಇರುತ್ತದೆ. ಕೂಗಳತೆ ದೂರದಲ್ಲಿ ಓವರ್ ಹೆಡ್ ಟ್ಯಾಂಕ್ ಇದ್ದರೂ ಸಮರ್ಪಕ ಕುಡಿಯುವ ನೀರು ಬರುತ್ತಿಲ್ಲ. ಮುಖ್ಯ ಕೊಳವೆ ಮಾರ್ಗಗಳು ಮತ್ತು ವಿತರಣ ಕೊಳವೆ ಮಾರ್ಗಗಳಲ್ಲಿ ಎರಡೂ ಕಡೆ 3 ಇಂಚು ಪೈಪ್ ಲೈನ್ ಇರುವ ಕಾರಣಕ್ಕೆ ಈ ಬಡಾವಣೆಗಳಿಗೆ ಸಮರ್ಪಕ ಕುಡಿಯುವ ನೀರು ಪೂರೈಕೆ ಸಾಧ್ಯವಾಗುತ್ತಿಲ್ಲ ಎಂದು ವಾಟರ್ ಮ್ಯಾನ್ ಕುಮಾರ್ ತಿಳಿಸಿದ್ದಾರೆ.

ಆದಪ್ರಯುಕ್ತ ಮುಖ್ಯ ಕೊಳವೆ ಮಾರ್ಗಗಳಲ್ಲಿ 10 ಇಂಚು ಪೈಪ್ ಲೈನ್ ಹಾಕಿಸಿ ಸಮರ್ಪಕ ಕುಡಿಯುವ ನೀರು ಪೂರೈಕೆ, ಚಂದ್ರಾ ಲೇ ಔಟ್ ನಲ್ಲಿರುವ ಉದ್ಯಾನವನ ಜಾಗವನ್ನು ನಗರ ಸಭೆ ದಾಖಲೆಗಳ ಪ್ರಕಾರ ಅಳತೆ ಮಾಡಿಸಿ ಗಡಿ ಗುರುತು ಮಾಡಿ ಗಿಡ ನೆಡುವ ಮೂಲಕ ಉದ್ಯಾನವನ ಜಾಗ, ನರ್ಸರಿ ಶಾಲೆ, ಆಟದ ಮೈದಾನದ ಜಾಗವನ್ನು ನಾಗರೀಕರಿಗೆ ಉಳಿಸಿಕೊಡಬೇಕೆಂದು ನಗರಸಭೆ ಪೌರಾಯುಕ್ತರಾದ ಮಹಾಂತೇಶ್ ರವರಿಗೆ ಮನವಿ ಮಾಡಿದರು.



ಇಕ್ಬಾಲ್ ಹುಸೇನ್, ಜಿ.ಹೆಚ್.ಸಿಖಂದರ್ ಇವರುಗಳಿಗೆ ಜಾನಪದ ಜಾಗೃತಿ ಪರಿಷತ್‌ನಿಂದ ಕರ್ನಾಟಕ ವಿಕಾಸ ರತ್ನ ಪ್ರಶಸ್ತಿ.

## ಪ್ರಮುಖ ಸುದ್ದಿ

# ಗ್ರಾಪಂ ಅವ್ಯವಹಾರ: ತನಿಖೆಗೆ ರೈತಸಂಘ ಒತ್ತಾಯ

» ಹಿರಿಯೂರು

ತಾಲೂಕಿನ ಯಾವ ಗ್ರಾಮ ಪಂಚಾಯತಿಯಲ್ಲೂ ಈ ಸ್ವತ್ತು ಖಾತೆ ಮಾಡುತ್ತಿಲ್ಲ, ಖಾಸಗಿ ಕಂಪ್ಯೂಟರ್ ಸೆಂಟರ್ ಗಳಲ್ಲಿ ಮಾಡಲಾಗುತ್ತಿದ್ದು, ಈ ಸ್ವತ್ತು ಖಾತೆಗೆ 1,50,000 ದಿಂದ ಕನಿಷ್ಠ 10,000 ದವರೆಗೆ ಹಣ ಪಡೆಯುತ್ತಿದ್ದಾರೆ ಎಂಬುದಾಗಿ ರೈತಸಂಘದ ತಾಲ್ಲೂಕು ಅಧ್ಯರಕ್ಷರಾದ ಕೆ.ಟಿ.ತಿಪ್ಪೇಸ್ವಾಮಿ ಆಪಾದಿಸಿದ್ದಾರೆ.

ನಗರದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಈ ಬಗ್ಗೆ ಮನವಿಪತ್ರ ಸಲ್ಲಿಸಿ ಅವರು ಮಾತನಾಡಿದರು.

ತಾಲ್ಲೂಕಿನ ಗ್ರಾಮ ಪಂಚಾಯತಿಗಳಲ್ಲಿ ಕಾಯ್ದೆ ಕಾನೂನುಗಳನ್ನು ಉಲ್ಲಂಘನೆ ಮಾಡಿ, ಅಕ್ರಮವಾಗಿ, ಕಾನೂನುಬಾಹಿರವಾಗಿ, ನಡೆಯುತ್ತಿರುವ ಅವ್ಯವಹಾರಗಳ ಕುರಿತು ಸೂಕ್ತವಾದ ತನಿಖೆ ನಡೆಸಿ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಅಗತ್ಯ ಕ್ರಮಕೈಗೊಳ್ಳುವಂತೆ ಅವರು ಒತ್ತಾಯಿಸಿದರು



ಕೆಲವು ಗ್ರಾಮ ಪಂಚಾಯಿತಿಗಳಲ್ಲಿ ರಾಜ ಪ್ರಮುಖರು, ರಾಜ್ಯಪಾಲರ ಹೆಸರಿನಲ್ಲಿ ಮತ್ತು ಶಿಕ್ಷಣಕ್ಕೆ ಮೀಸಲಿರಿಸಿದ ಸ್ಥಳ, ಸರ್ಕಾರಿ ಜಾಗ, ಗುಂಡು ತೋಪು, ಗ್ರಾಮ ಠಾಣಾ ಜಾಗಗಳಲ್ಲಿ ಈ ಸ್ವತ್ತು ಖಾತೆ ಮಾಡಲಾಗಿರುತ್ತಿದೆ ಹಣ ಕೊಡದೆ ಇದ್ದಲ್ಲಿ 2/3 ವರ್ಷ ಕಳೆದರೂ ಈ ಸ್ವತ್ತು ಖಾತೆ ಮಾಡಿಕೊಡುವುದಿಲ್ಲ.

ಅಲ್ಲದೆ ನಗರ ಹಾಗೂ ಗ್ರಾಮ ಸಭೆ ನಡೆಸದೆ ವಸತಿ ಯೋಜನೆ ಫಲಾನುಭವಿಗಳನ್ನು ಪಂಚಾಯತಿಯಲ್ಲಿ ಆಯ್ಕೆಮಾಡಲಾಗುತ್ತಿದ್ದು, ತಾಲೂಕಿನಲ್ಲಿ ವಿವಿಧ ವಸತಿ ಯೋಜನೆಗಳಲ್ಲಿ ಸುಮಾರು 5000ಕ್ಕೂ ಹೆಚ್ಚು ಮನೆಗಳು ಬೋಗಸ್ಸಾಗಿವೆ ಅನೇಕ ಬಾರಿ ಮನವಿ ಮಾಡಿದರು ಇದುವರೆಗೂ ತನಿಖೆ ನಡೆಸಿ ಕ್ರಮಕೈಗೊಂಡಿಲ್ಲ.

ಉದ್ಯೋಗ ಖಾತರಿ ಯೋಜನೆಯಲ್ಲಿ ಹಲವಾರು ಗ್ರಾಮ ಪಂಚಾಯಿತಿಯಲ್ಲಿ ಕಾಮಗಾರಿ ನಡೆಸದೆ ಬಿಲ್ ಪಡೆದಿರುತ್ತಾರೆ ಮತ್ತು ರೈತರ ಕಾಮಗಾರಿಗಳಿಗೆ ಎನ್ ಎಂ ಆರ್ ಹಾಕದೆ ಅನೇಕ ಬಾರಿ ಜೋರು ಮಾಡುತ್ತಾರೆ ಮತ್ತು ರೈತರ ಕಾಮಗಾರಿಗಳಿಗೆ ಇದುವರೆಗೂ ಸಪ್ಲೇ ಬಿಲ್ ಕೊಟ್ಟಿರುವುದಿಲ್ಲ.

ಉದ್ಯೋಗ ಖಾತರಿ ಇಂಜಿನಿಯರ್ ಸರಿಯಾಗಿ ಕಾರ್ಯನಿರ್ವಹಿಸದೆ ಫಲಾನುಭವಿಗಳಿಗೆ ಎಂ ಬಿ ಬರೆಯಲು ಕೊಡುತ್ತಾರೆ. ಕಂಪ್ಯೂಟರ್ ಆಪರೇಟರ್ ಕೆಲವು ಅವರ ಪರಿಚಯಸ್ತರ ಅಕೌಂಟ್ ಗೆ ಹಣ ಹಾಕಿಕೊಳ್ಳುತ್ತಾರೆ ಮತ್ತು ಪಂಚಾಯತಿಯಲ್ಲಿ ಗ್ರಾಮಸ್ಥರಿಗೆ ಸರಿಯಾಗಿ ಸ್ಪಂದಿಸುತ್ತಿಲ್ಲ.

ಜಲಜೀವನ್ ಯೋಜನೆ ಕಾಮಗಾರಿಯಲ್ಲಿ ಕಳಪೆ ಕಾಮಗಾರಿ ನಡೆಯುತ್ತಿದೆ, ಗ್ರಾಮಗಳಲ್ಲಿ ಐ ಮಾರ್ಕ್ ಅಳವಡಿಸುವಲ್ಲಿ ಬಾರಿ ಅವ್ಯವಾರ ನಡೆದಿದೆ, ಗ್ರಾಮ ನೈರ್ಮಲ್ಯ ನಿರ್ವಹಣೆಯಲ್ಲಿ ಸಂಪೂರ್ಣ ವಿಫಲವಾಗಿದ್ದು ಪೆನಾಯಿಲ್, ಬ್ಲಿಚಿಂಗ್ ಪೌಡರ್ ಬಳಸುತ್ತಿಲ್ಲ, ಇವುಗಳ ಬಗ್ಗೆ ಸಂಪೂರ್ಣ ತನಿಖೆ ನಡೆಸಬೇಕು ಎಂದರಲ್ಲದೆ,ಪಂಚಾಯತಿ ವ್ಯಾಪ್ತಿಯಲ್ಲಿ ಇರುವ ಕೈಗಾರಿಕೆಗಳು ಮತ್ತು ವಾಣಿಜ್ಯ ಕಂಪನಿಗಳಲ್ಲಿ ಉತ್ಪಾದನೆಗೆ ಅನುಗುಣವಾಗಿ ತೆರಿಗೆ ವಸೂಲಾತಿ ಮಾಡದೆ ಅಧಿಕಾರಿಗಳು ಕಂಪನಿಯ ಮಾಲೀಕರೊಂದಿಗೆ ಒಳ ಒಪ್ಪಂದ ಮಾಡಿಕೊಂಡು ಕಂದಾಯ ವಸೂಲಾತಿ ಆಗುತ್ತಿಲ್ಲ. ಅನೇಕ ಕೈಗಾರಿಕೆ ಮತ್ತು ವಾಣಿಜ್ಯ ಕಂಪನಿಗಳ ವಿರುದ್ಧ ಸಾರ್ವಜನಿಕರು ದೂರು ನೀಡಿದರೂ ಯಾವುದೇ ಕ್ರಮವಹಿಸುತ್ತಿಲ್ಲ ಎಂದು ದೂರಿದರು.

ಗ್ರಾಮ ಪಂಚಾಯತಿಗಳಲ್ಲಿ ಸರ್ಕಾರಿ ದಾಖಲೆಗಳನ್ನು ಸಾರ್ವಜನಿಕ ಮಾಹಿತಿ ಹಕ್ಕು ಅಧಿನಿಯಮ 2005 ರ ಅಡಿಯಲ್ಲಿ ಅರ್ಜಿ ಸಲ್ಲಿಸಿದರು ಮಾಹಿತಿ ಕೊಡುತ್ತಿಲ್ಲ. ತಾಲೂಕು ಪಂಚಾಯಿತಿ ಆಡಳಿತ ಅವಧಿ ಮುಗಿದಾಗಿನಿಂದ ಇಂದಿನವರೆಗೆ ಎಲ್ಲಾ ಅನುದಾನಗಳ ಕಾಮಗಾರಿಗಳ ತನಿಖೆ ನಡೆಸಬೇಕು ಎಂದರಲ್ಲದೆ,

ಈ ಎಲ್ಲಾ ವಿಷಯಗಳ ಬಗ್ಗೆ ಸಮಗ್ರವಾಗಿ ಚರ್ಚಿಸಲು ಅಭಿವೃದ್ಧಿ ಅಧಿಕಾರಿಗಳು ಮತ್ತು ರೈತ ಸಂಘದ ಪದಾಧಿಕಾರಿಗಳೊಂದಿಗೆ ಸಭೆ ನಡೆಸಿದರೆ ಎಲ್ಲಾ ದಾಖಲೆಗಳನ್ನು ಸಭೆಗೆ ಒಪ್ಪಿಸುತ್ತೇವೆ. ಆದ್ದರಿಂದ ತಾವುಗಳು ಸಮಗ್ರ ತನಿಖೆ ನಡೆಸಲು ಜಿಲ್ಲಾ ಮಟ್ಟದ ವಿಶೇಷ ತಂಡ ರಚಿಸಿ ತನಿಖೆ ನಡೆಸಿ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂಬುದಾಗಿ ಆಗ್ರಹಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಡಿ.15 ರವರೆಗೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

» **ಚಿತ್ರದುರ್ಗ**

2023-24ನೇ ಸಾಲಿನ ಡಾ.ಬಿ.ಆರ್.ಅಂಬೇಡ್ಕರ್ ನಿಗಮದ ವಿವಿಧ ಯೋಜನೆಗಳಡಿ ಸೌಲಭ್ಯ ಕೋರಿ ಅರ್ಜಿಗಳನ್ನು ಸಲ್ಲಿಸಲು ಆಹ್ವಾನಿಸಲಾಗಿರುವ ಕೊನೆಯ ದಿನಾಂಕವನ್ನು ಡಿಸೆಂಬರ್ 15 ರವರೆಗೆ ವಿಸ್ತರಿಸಲಾಗಿದೆ. ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಗೆ ಒಳಪಡುವ ನಿಗಮಗಳಿಂದ ವಿವಿಧ ಯೋಜಗಳಡಿ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಂಬಂಧ ಅರ್ಜಿಗಳನ್ನು ಆನ್‍ಲೈನ್ ತಂತ್ರಾಂಶದ ಸೇವಾ-ಸಿಂಧು ಪೋರ್ಟಲ್ ಮುಖಾಂತರ 2023ರ ನವೆಂಬರ್ 1 ರಿಂದ 29 ರವರೆಗೆ ಆಹ್ವಾನಿಸಲಾಗಿತ್ತು. ಇದೀಗ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ಡಿಸೆಂಬರ್ 15 ರವರೆಗೆ ವಿಸ್ತರಿಸಲಾಗಿದೆ ಎಂದು ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎಂ.ರಾಮಪ್ಪನವರಿಂದ ವಿವಿಧ ಮುಖಂಡರ ಭೇಟಿ



» **ಚಳ್ಳಕೆರೆ**

ಕಳೆದ ಹಲವಾರು ವರ್ಷಗಳಿಂದ ಕಾಂಗ್ರೆಸ್ ಪಕ್ಷದ ಸಂಘಟನೆಯಲ್ಲಿ ಹೆಚ್ಚು ಕಾರ್ಯಪ್ರವೃತ್ತನಾಗಿದ್ದು, 2024ರ ಲೋಕಸಭಾ ಚುನಾವಣೆಯಲ್ಲಿ ಚಿತ್ರದುರ್ಗ ಕ್ಷೇತ್ರದಿಂದ ಸ್ಪರ್ಧಿಸಲು ನಿರ್ಧರಿಸಿದ್ದು, ಈಗಾಗಲೇ ಕ್ಷೇತ್ರದ ವಿವಿದೆಡೆ ಪ್ರವಾಸ ನಡೆಸಿ ಪಕ್ಷದ ಮುಖಂಡರ ಹಾಗೂ ಕಾರ್ಯಕರ್ತರ ಆಶೀರ್ವಾದ ಪಡೆಯುತ್ತಿದ್ದೇನೆಂದು ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ನೇರಲಗುಂಟೆ ಎಂ.ರಾಮಪ್ಪ ತಿಳಿಸಿದರು.ಅವರು, ನಾಯಕನಹಟ್ಟಿ ಹೋಬಳಿ ಎನ್.ಮಹದೇವಪುರ ಗ್ರಾಮದ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಪಟೇಲ್ ತಿಪ್ಪೇಸ್ವಾಮಿಯವರ ನಿವಾಸಕ್ಕೆ ಭೇಟಿ ನೀಡಿ ಚುನಾವಣೆಯಲ್ಲಿ ಸ್ಪರ್ಧಿಸಲು ಸಿದ್ದತೆ ನಡೆಸುತ್ತಿದ್ದು, ತಾವು ಸಹಕಾರ ನೀಡುವಂತೆ ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ತಿಪ್ಪೇಸ್ವಾಮಿಯವರ ತಂದೆ ದಿವಂಗತ ಪಟೇಲ್ ಪಾಪನಾಯಕ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಾಗಿ, ಮಾಜಿ ಶಾಸಕರಾಗಿ ಸೇವೆ ಸಲ್ಲಿಸಿದ್ದರು. ಅವರ ರಾಜಕೀಯ ಕ್ಷೇತ್ರದಲ್ಲಿ ಎರಡು ಬಾರಿ ಜಿಲ್ಲಾ ಪಂಚಾಯಿತಿಗೆ ಆಯ್ಕೆಯಾದ ಪಟೇಲ್ ತಿಪ್ಪೇಸ್ವಾಮಿ ಸಹ ರಾಜಕೀಯದಲ್ಲಿ ಹೆಚ್ಚು ಅನುಭವ ಹೊಂದಿದ್ದು ಅವರ ಮಾರ್ಗದರ್ಶನ ಕೋರಿರುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಕೆ.ಸೂರನಾಯಕ ಉಪಸ್ಥಿತರಿದ್ದರು.

### ಸದಾಶಿವ ಆಯೋಗ ವರದಿ ಜಾರಿಗೆ ಪ್ರಧಾನಮಂತ್ರಿ ಸಮ್ಮತಿ: ಎಂ.ಶಿವಮೂರ್ತಿ ಹರ್ಷ

» **ಚಳ್ಳಕೆರೆ**



ಕಳೆದ ಹಲವಾರು ದಶಕಗಳಿಂದ ಮಾದಿಗ ಸಮುದಾಯ ಅವಮಾನ, ಶೋಷಣೆ, ಸೂಕ್ತ ಪ್ರಾತಿನಿಧ್ಯತೆ ಇಲ್ಲದೆ ಕಂಗಾಲಾಗಿದ್ದು, ಈ ಜನಾಂಗದ ಸರ್ವತೋಮುಖ ಅಭಿವೃದ್ದಿಗೆ ಡಾ.ಸದಾಶಿವ ಆಯೋಗ ವರದಿ ಜಾರಿ ಮಾಡುವುದೇ ಪ್ರಮುಖ ಅಸ್ತ್ರವಾಗಿದ್ದು, ಪ್ರಧಾನಮಂತ್ರಿ ನರೇಂದ್ರಮೋದಿ ಸಮುದಾಯದ ಬಹುವರ್ಷಗಳಬೇಡಿಕೆ ಈಡೇರಿಸುವಲ್ಲಿ ಸಮ್ಮತಿ ನೀಡಿದ್ದು, ಸಮಸ್ತ ಮಾದಿಗ ಸಮುದಾಯ ಅವರನ್ನು ಬೆಂಬಲಿಸಬೇಕೆಂದು ಜಿಲ್ಲಾ ಮಾದಿಗ ಮಹಾಸಭಾದ ಅಧ್ಯಕ್ಷ, ಮಾಜಿ ಪುರಸಭಾ ಸದಸ್ಯ ಎಂ.ಶಿವಮೂರ್ತಿ ತಿಳಿಸಿದ್ದಾರೆ.

ಅವರು, ಪತ್ರಿಕೆಯೊಂದಿಗೆ ಮಾತನಾಡಿ, ಇತ್ತೀಚಿಗಷ್ಟೇ ಲೋಕಸಭಾ ಸದಸ್ಯ ಕೇಂದ್ರ ನ್ಯಾಯ ಮತ್ತು ಸಬಲೀಕರಣ ರಾಜ್ಯ ಸಚಿವ ಎ.ನಾರಾಯಣಸ್ವಾಮಿಯವರನ್ನು ನಮ್ಮ ನಿಯೋಗ ಭೇಟಿ ಮಾಡಿದಾಗ ಸದಾಶಿವ ಆಯೋಗ ವರದಿ ಜಾರಿ ಬಗ್ಗೆ ಕೇಂದ್ರ ಸರ್ಕಾರ ಈಗಾಗಲೇ ಶಿಫಾರಸ್ಸು ಮಾಡಿದ್ದು ಶೀಘ್ರದಲ್ಲೇ ಅನುಷ್ಟಾನಕ್ಕೆ ಬರಲಿದೆ. ಇದರಿಂದ ಮಾದಿಗ ಸಮುದಾಯದ ದಶಕಗಳ ಹೋರಾಟಕ್ಕೆ ಮುಕ್ತಿದೊರೆಯಲಿದ್ದು, ಮಾದಿಗ ಸಮುದಾಯವೂ ಸಹ ರಾಜಕೀಯ ಕ್ಷೇತ್ರವೂ ಸೇರಿದಂತೆ ಎಲ್ಲಾ ಕ್ಷೇತ್ರದಲ್ಲಿ ಹೆಚ್ಚು ಪಾಲ್ಗೊಳ್ಳಲು ಅನುಕೂಲವಾಗಲಿದೆ ಎಂದಿದ್ದಾರೆ.

ಕಳೆದ ನೂರಾರು ವರ್ಷಗಳಿಂದ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷ ಮಾದಿಗ ಸಮುದಾಯವನ್ನು ಕೇವಲ ಮತಬ್ಯಾಂಕಾಗಿ ಉಪಯೋಗಿಸಿದ್ದು, ಯಾವುದೇ ಸೌಲಭ್ಯಗಳನ್ನು ಈ ಸಮುದಾಯಕ್ಕೆ ನೀಡದೆ ವಂಚನೆ ನಡೆಸಿದೆ. ಆದರೆ, ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಸದಾಶಿವ ಆಯೋಗದ ವರದಿ ಜಾರಿಯ ಬಗ್ಗೆ ಸೂಕ್ತ ಚಿಂತನೆ ನಡೆಸಿ ಪರಿಹಾರವನ್ನು ನೀಡಿದ್ದಾರೆ. ಬರುವ ದಿನಗಳಲ್ಲಿ ಮಾದಿಗ ಸಮುದಾಯದ ಅಭಿವೃದ್ದಿಗಾಗಿ ಸದಾಶಿವ ಆಯೋಗ ವರದಿ ಜಾರಿ ಬಗ್ಗೆ ಕಾರ್ಯಪ್ರವೃತ್ತರಾಗಿದ್ದು, ಇಡೀ ಸಮುದಾಯ ಈ ಕೊಡುಗೆಯನ್ನು ಸದಾ ಸ್ಮರಿಸುವುದಲ್ಲದೆ, ಮೋದಿಯವರನ್ನು ಸಹ ಬೆಂಬಲಿಸುವಂತೆ ಅವರು ಮನವಿ ಮಾಡಿದ್ದಾರೆ.

# ಕಲೆ ದೈವೀದತ್ತ, ವಯೋ ಮಿತಿಯಿಲ್ಲ: ಕುಂಬಾರ್

» **ದಾವಣಗೆರೆ**

ಕಲೆ ದೈವೀದತ್ತವಾದುದು. ಕಲಾಭಿವ್ಯಕ್ತಿಗೆ ವಯೋಮಾನದ ಮಿತಿ ಎಂಬುದಿಲ್ಲ. ನಿರಂತರ ಅಭ್ಯಾಸದಲ್ಲಿದ್ದರೆ, ಕಲಾರಚನೆಯಲ್ಲಿ ಕಲಾವಿದರು ಸತತವಾಗಿ ತೊಡಗಿಕೊಂಡಿದ್ದರೆ ಮಾತ್ರ ಕಲಾ ಪ್ರತಿಭೆ ಪ್ರಬುದ್ಧತೆ ಪಡೆದುಕೊಳ್ಳುತ್ತದೆ ಎಂದು ದಾವಣಗೆರೆ ವಿಶ್ವವಿದ್ಯಾನಿಲಯದ ಉಪ ಕುಲಪತಿ ಪ್ರೊ.ಬಿ.ಡಿ.ಕುಂಬಾರ್ ಹೇಳಿದರು.

ದಾವಣಗೆರೆಯ ದೃಶ್ಯ ಕಲಾ ಮಹಾವಿದ್ಯಾಲಯದ ದೃಶ್ಯ ವಿಶ್ವ ಕಲಾಗ್ಯಾಲರಿಯಲ್ಲಿ ಇಂದಿನಿಂದ ಏರ್ಪಟ್ಟಿರುವ ದೃಶ್ಯಾನುಭವ 2023 ಶೀರ್ಷಿಕೆಯ ಚಿತ್ರ ಕಲೆ ಮತ್ತು ಅನ್ವಯಿಕ ಕಲಾ ವಿಭಾಗಗಳ ಸ್ನಾತಕೋತ್ತರ ಪದವಿಯ ಅಂತಿಮ ವರ್ಷದ ವಿದ್ಯಾರ್ಥಿಗಳ ಸಮೂಹ ಕಲಾ ಪ್ರದರ್ಶನಕ್ಕೆ ಚಾಲನೆ ನೀಡಿ, ಅಧ್ಯಕ್ಷತೆ ವಹಿಸಿ ಮಾತನಾಡಿದರು.

ದಾವಣಗೆರೆ ವಿವಿಯ ದೃಶ್ಯ ಕಲಾ ಮಹಾವಿದ್ಯಾಲಯದ ವಿದ್ಯಾರ್ಥಿಗಳ



ಪ್ರತಿಭೆ ಗುರುತರವಾದುದು. ಹಾಗಾಗಿ ಇಂದು ಕಲಾಕೃತಿಗಳನ್ನು ಪ್ರದರ್ಶಿಸುತ್ತಿರುವ ಈ ಮಹಾವಿದ್ಯಾಲಯದ ಸ್ನಾತಕೋತ್ತರ ಪದವಿಯ ಚಿತ್ರ ಕಲೆ ಹಾಗೂ ಅನ್ವಯಿಕ ಕಲಾ ವಿದ್ಯಾರ್ಥಿಗಳು ಕಲಾ ರಚನೆಯನ್ನು ಇಲ್ಲಿಗೇ ಮುಕ್ತಾಯಗೊಳಿಸದೆ, ಅದನ್ನು ಮುಂಬರುವ ದಿನಗಳಲ್ಲೂ ಮುಂದುವರಿಸಬೇಕು. ತನ್ಮೂಲಕ ಔದ್ಯೋಗಿಕ ಅವಕಾಶಗಳು ದೊರಕುವಂತೆ ಪ್ರಯತ್ನಶೀಲರಾಗಬೇಕು ಎಂದು ಕರೆ ನೀಡಿದರು.ಪ್ರಾಚಾರ್ಯ ಡಾ.ಜೈರಾಜ ಚಿಕ್ಕ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿ 2023ನೇ ಸಾಲಿನಲ್ಲಿ ಸ್ನಾತಕೋತ್ತರ ಪದವಿ ಮುಗಿಸಿ ಬೀಳ್ಕೊಡುಗೆಗೊಳ್ಳುತ್ತಿರುವ ವಿದ್ಯಾರ್ಥಿಗಳ ಬದ್ಧತೆ, ವಿಧೇಯತೆ, ಸಹಕಾರ ಮನೋಭಾವ ಸದಾ ಸ್ಮರಣೀಯವಾದುದು. ಅವರಿಗೆ ಸೂಕ್ತ ಮಾರ್ಗದರ್ಶನ ಮಾಡಿ ಪ್ರೊ□□□ತ್ಸಾಹಿಸಿದ ನಮ್ಮ ಬೋಧಕ ವೃಂದದ ಶ್ರಮ ಕೂಡಾ ಶ್ಲಾಘನೀಯ. ಈ ಕಲಾಪ್ರದರ್ಶನ ಡಿಸೆಂಬರ್ 9ರವರೆಗೆ ಬೆಳಿಗ್ಗೆ 10.30ರಿಂದ ಸಂಜೆ 6ಗಂಟೆವರೆಗೆ ನಡೆಯಲಿದೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ದಾವಣಗೆರೆಯ ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಡಾ.ರಾಘವೇಂದ್ರ ಪ್ರಸಾದ್, ಡಾ.ರವೀಂದ್ರ ಎಸ್.ಕಮ್ಮಾರ್,ಭೋಧನಾಸಹಾಯಕರಾದ ಶಿವಶಂಕರ್ ಸುತಾರ್, ದತ್ತಾತ್ರೇಯ ಎನ್.ಭಟ್ಟ, ಡಾ.ಸಂತೋ□□ಕುಮಾರ್ ಕುಲಕರ್ಣಿ, ಡಾ.ಗಿರೀ□□ಕುಮಾರ್, ಎಸ್.ಹೆಚ್.ಹರೀಶ್, ಕೆ.ವಿ.ಪ್ರಮೋದ್, ಡಿ.ಹೆಚ್.ಸುರೇಶ್, ರಂಗನಾಥ್ ಕುಲಕರ್ಣಿ, ನವೀ□□ಕುಮಾರ್, ಅರುಣ್ ಕಮ್ಮಾರ್, ನಂದಕುಮಾರ್, ಶಿವಕುಮಾರ್ ಅಜಗಣ್ಣವರ್, ರೇವಣಸಿದ್ದಪ್ಪ, ಮಹಾಲಿಂಗಪ್ಪ ಇತರರು ಇದ್ದರು.



**ಸಮಾಜದ ಸಾಧಕರಿಗೆ ಸನ್ಮಾನ: ಕನ್ನಡ ದೈವಜ್ಞ ಬ್ರಾಹ್ಮಣ ಸಂಘ ದಾವಣಗೆರೆ ಇವರಿಂದ ಭಾನುವಾರ 10ನೇ ವರ್ಷದ ವಾರ್ಷಿಕ ಮಹಾಸಭೆಯನ್ನು ಶ್ರೀ ಸತ್ಯನಾರಾಯಣ ಪೂಜೆಯೊಂದಿಗೆ ಆಚರಿಸಲಾಯಿತು. ಈ ಸಂದರ್ಭದಲ್ಲಿ ರಕ್ತದಾನ ಶಿಬಿರ ಸಾಧಕರಿಗೆ ಸನ್ಮಾನ ಹಾಗೂ ಪ್ರತಿಭಾ ಪುರಸ್ಕಾರ ಮಾಡಲಾಯಿತು.**

## ಹಿಂದಿನ ಜಿಪಂ ಸಿಇಓ ವಿರುದ್ದ ಕ್ರಿಮಿನಲ್ ಕೇಸ್ ದಾಖಲು ಮಾಡುವಂತೆ ಆಗ್ರಹ

» **ಚಿತ್ರದುರ್ಗ**



ಪಿಡಿಓರವರಿಂದ ದುರುಪಯೋಗವಾದ ಹಣವನ್ನು ವಸೂಲಿ ಮಾಡದೇ ಅವರಿಗೆ ಬಡ್ತಿಯನ್ನು ನೀಡಿದ ಹಿಂದಿನ ಸಿಇಓ ದಿವಾಕರ್ ರವರ ವಿರುದ್ದ ಸರ್ಕಾರ ಕ್ರಿಮಿನಲ್ ಕೇಸ್ ದಾಖಲು ಮಾಡುವ ಆಗ್ರಹಿಸಿ ತಾಳಿಕಟ್ಟೆ ರೇವಣ್ಣ ಒಂದು ದಿನದ ಉಪವಾಸ ಸತ್ಯಗ್ರಹವನ್ನು ನಗರದ ಜಿಲ್ಲಾಧಿಕಾರಿಗಳ ಕಚೇರಿ ಬಳಿ ನಡೆಸಿದರು.

ಹೊಳಲ್ಕೆರೆ ತಾಲ್ಲೂಕಿನ ದುಮ್ಮಿ ಗ್ರಾಮ ಪಂಚಾಯಿತಿಯ ಪಿಡಿಓ ರಾಘವೇಂದ್ರ ರವರು ತಮ್ಮ ಅಧಿಕಾರದ ಅವಧಿಯಲ್ಲಿ 14 ಮತ್ತು 15ನೇ ಹಣಕಾಸು ಯೋಜನೆಯಲ್ಲಿ 75,29,368 ರೂ. ಗಳನ್ನು ದುರುಪಯೋಗ ಮಾಡಿಕೊಂಡಿದ್ದಾರೆ. ಇದರ ವಿರುದ್ದ ಈ ದುರುಬಳಿಕೆ ಮಾಡಿದ ವರದಿಯನ್ನು ಜಿಲ್ಲಾ ಪಂಚಾಯಿತಿ ಕಛೇರಿಗೆ ವರದಿ ಸಲ್ಲಿಸುತ್ತಾರೆ.

ಕಾರ್ಯ ನಿರ್ವಹಕ ಅಧಿಕಾರಿ ತಾಲ್ಲೂಕು ಪಂಚಾಯಿತಿ ಮೊಳಕಾಲ್ಲೂರು ರವರು ನೌಕರರ ವಿರುದ್ಧ ಮುಂದಿನ ಕ್ರಮ ಕೈಗೊಳ್ಳಲು ಕೋರಿರುವ ಹಿನ್ನಲೆಯಲ್ಲಿ ಸದರಿಯವರ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ಕಂಡುಕೊಳ್ಳುವ ಕುರಿತು ಇಲಾಖಾ ವಿಚಾರಣೆ ನಡೆಸಲು ಉದ್ದೇಶಿಸಿ ಉಲ್ಲೇಖ(6) ರಲ್ಲಿನ ಈ ಕಾರ್ಯಾಲಯ ಆದೇಶದಲ್ಲಿ ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಗಳನ್ನು ನೇಮಕ ಮಾಡಿ ಆದೇಶಿಸಲಾಗಿರುತ್ತದೆ. ಜಿಲ್ಲಾ ಪಂಚಾಯಿತಿ ಕಛೇರಿಯಿಂದ ದುಮ್ಮಿ ಗ್ರಾಮ ಪಂಚಾಯಿತಿಯ ಪಿ ಡಿ ಓ ರಾಘವೇಂದ್ರ ರವರಿಗೆ ವಿಚಾರಣಗೆ ನೋಟಿಸ್ ಜಾರಿ ಮಾಡಿದ್ದು, ವಿಚಾರಣ ಯಾವುದೇ ನೋಟಿಸ್ ಗೆ ಉತ್ತರ ಕೊಡದೇ ವಿಚಾರಣೆ ಗೈರು ಹಾಜರು ಕಂಡು ಬಂದಿದ್ದು, ರೂ 75,29,368/- ಆರೋಪ ಸಾಭೀತು ಆಗಿದ್ದು, ಈ ವರದಿಯನ್ನು ಮುಂದಿನ ಕ್ರಮಕ್ಕಾಗಿ ಸಿ ಓ ಕಛೇರಿಗೆ ಸಲ್ಲಿಕೆ ಮಾಡಿರುತ್ತಾರೆ.

ಈ ವರದಿ ಆಧಾರದ ಮೇಲೆ ಸಿಇಓ ದಿವಾಕರ್ ಪಿಡಿಓಗೆ ಅಂತಿಮ 03-09-2022 ನೋಟಿಸ್ ಜಾರಿ ಮಾಡಿದರೂ ಕಾಲ ಮಿತಿಒಳಗೆ ಕ್ರಮ ಕೈಗೊಳ್ಳದೇ ದುಮ್ಮಿ ಗ್ರಾಮ ಪಂಚಾಯಿತಿ ಕಛೇರಿಯ ಮನೆ ಮತ್ತು ಪಿ ಡಿ ಓ ಮನೆ ಕದ ತಟ್ಟಿದ ಸಿಇಓ ದಿವಾಕರ್ ರವರು ಪೂರಕ ದಾಖಲೆಗಳನ್ನು ಸಂಗ್ರಹ ಮಾಡಿ 191 ದಿನಗಳ ನಂತರ ಪಿಡಿಓ. ರವರ ಒಂದು ವೇತನ ಭರ್ತಿಯನ್ನು ಕಡಿತ ಮಾಡುವುದರ ಮೂಲಕ ರಕ್ಷಣೆಗೆ ನಿಂತ ಜಿಲ್ಲಾ ಪಂಚಾಯಿತಿ ಸಿ ಓ ದಿವಾಕರ್ ರವರ ವಿರುದ್ಧ ಕ್ರಿಮಿನಲ್ ಕೇಸ್ ದಾಖಲು ಮಾಡುವ ಕುರಿತು ಮುಖ್ಯ ಮಂತ್ರಿ ಸಿದ್ದರಾಮಯ್ಯ ನವರು ಸರ್ಕಾರದ ವಿರುದ್ಧ ಉಪವಾಸ ಮಾಡಲಾಗುತ್ತಿದೆ ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯರವರು ರೂ 75,29.368/- ಹಣ ದುರುಬಳಿಕೆ ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಗಳಿಂದ ಆರೋಪ ಸಾಬೀತು ವರದಿಯನ್ನು ಚಿತ್ರದುರ್ಗ ಜಿಲ್ಲಾ ಪಂಚಾಯಿತ್ ಸಿಈಓ ದಿವಾಕರ್ ಕಛೇರಿಗೆ ಸಲ್ಲಿಕೆ. ಈ ದುರುಬಳಕೆ ಹಣವನ್ನು ಸರ್ಕಾರಕ್ಕೆ ಜಮಾ ಮಾಡಿಸದೇ ಪಿಡಿಓರವರ ರಕ್ಷಣೆಗೆ ನಿಂತು ಒಂದು ಭಡ್ತಿಯ ವೇತನವನ್ನು ಕಡಿತ ಮಾಡುವ ಮೂಲಕ ಪ್ರಕರಣವನ್ನು ಮುಕ್ತಾಯ ಮಾಡಿದ ಸಿಇಓ ದಿವಾಕರ್ ವಿರುದ್ದ ಸಿದ್ದರಾಮಯ್ಯ ರವರ ಸರ್ಕಾರ ಕ್ರಿಮಿನಲ್ ಕೇಸ್ ದಾಖಲು ಮಾಡುವಂತೆ ತಾಳಿಕಟ್ಟೆ ರೇವಣ್ಣ ಆಗ್ರಹಿಸಿದ್ದಾರೆ.

## ಡಿ.13ರಂದು ಜಿಲ್ಲಾಮಟ್ಟದ ಸಿರಿಧಾನ್ಯ ಪಾಕ ಸ್ಪರ್ಧೆ: ಅರ್ಜಿ ಆಹ್ವಾನ

» **ಚಿತ್ರದುರ್ಗ**

ಅಂತರಾಷ್ಟ್ರೀಯ ಮಟ್ಟದ ಸಿರಿಧಾನ್ಯ ಮತ್ತು ಸಾವಯವ ಮೇಳ-2024ರ ಅಂಗವಾಗಿ ರಾಜ್ಯಮಟ್ಟದ ಸಿರಿಧಾನ್ಯ ಪಾಕ ಸ್ಪರ್ಧೆಯ ಪೂರ್ವಭಾವಿಯಾಗಿ ಜಿಲ್ಲಮಟ್ಟದಲ್ಲಿ ಸಿರಿಧಾನ್ಯ ಪಾಕ ಸ್ಪರ್ಧೆಯನ್ನು ಕೃಷಿ ಇಲಾಖೆಯಿಂದ ಡಿಸೆಂಬರ್ 13ರಂದು ಬೆಳಿಗ್ಗೆ 11ಕ್ಕೆ ಜಂಟಿ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಏರ್ಪಡಿಸಲಾಗಿದ್ದು, ಈ ಸಂಬಂಧ ಅರ್ಜಿ ಆಹ್ವಾನಿಸಲಾಗಿದೆ.

ಸ್ಪರ್ಧೆಯಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳನ್ನು ಹೊರತುಪಡಿಸಿ, ಜಿಲ್ಲೆಯ ಎಲ್ಲಾ ಸಾರ್ವಜನಿಕರಿಗೆ ಭಾಗವಹಿಸಲು ಅವಕಾಶವಿರುತ್ತದೆ. ಅಭ್ಯರ್ಥಿಗಳು ತಮ್ಮ ಭಾವಚಿತ್ರದೊಂದಿಗೆಹೆಸರು,ವಿಳಾಸಮತ್ತುತಯಾರಿಸುವ ಖಾದ್ಯ, ಬೇಕಾಗುವ ಸಾಮಾಗ್ರಿಗಳು, ತಯಾರಿಸಲು ಬೇಕಾಗುವ ಸಮಯ ಹಾಗೂ ತಯಾರಿಸುವ ವಿಧಾನದ ಸಂಕ್ಷಿಪ್ತ ಮಾಹಿತಿಯೊಂದಿಗೆ ಅರ್ಜಿಯನ್ನು ಡಿಸೆಂಬರ್ 12ರೊಳಗೆ ಇ-ಮೇಲ್ ವಿಳಾಸ jdagricta@yahoo.co.in/ jdagrictd@gmail.com ಅಥವಾ ಖುದ್ದಾಗಿ ಪೋಸ್ಟ್ ಮುಖಾಂತರ ಜಂಟಿ ಕೃಷಿ ನಿರ್ದೇಶಕರ ಕಚೇರಿ, ಎಪಿಎಂಸಿ ರಸ್ತೆ, ಚಿತ್ರದುರ್ಗ-577501 ವಿಳಾಸಕ್ಕೆ ಕಳುಹಿಸಲು ತಿಳಿಸಲಾಗಿದೆ.

ಪ್ರತಿ ಸ್ಪರ್ಧಿಗೆ ಒಂದೇ ತಿನಿಸು ಸಿಹಿ ಅಥವಾ ಖಾರ (ಸಸ್ಯಹಾರಿ ತಿನಿಸುಗಳು ಮಾತ್ರ) ತಯಾರಿಸುವ ಅವಕಾಶವಿರುತ್ತದೆ. ತಮ್ಮ ಅರ್ಜಿಯಲ್ಲಿ ನಮೂದಿಸಿದ ತಿನಿಸುಗಳನ್ನು, ಮನೆಯಲ್ಲಿಯೇ ತಯಾರಿಸಿ, ಡಿಸೆಂಬರ್ 13ರಂದು ಬೆಳಿಗ್ಗೆ 11ಕ್ಕೆ ಸರಿಯಾಗಿ ಜಂಟಿ ನಿರ್ದೇಶಕರ ಕಚೇರಿಯಲ್ಲಿ ಪ್ರದರ್ಶಿಸುವುದು. ತಯಾರಿಸಿದ ತಿನಿಸುಗಳ ಪ್ರದರ್ಶನ ಬಳಸಿದ ಸಾಮಗ್ರಿಗಳು, ತೋರಿಕೆ, ರುಚಿ, ಸುವಾಸನೆ, ಪೌಷ್ಠಿಕತೆಗಳ ಅಂತಿಮ ತೀರ್ಪು ಕೈಗೊಳ್ಳಲಾಗುವುದು. ತೀರ್ಪುಗಾರರ ನಿರ್ಧಾರವೇ ಅಂತಿಮವಾಗಿರುತ್ತದೆ. ಜಿಲ್ಲಾಮಟ್ಟಕ್ಕೆ ಪ್ರಥಮ ಬಹುಮಾನವಾಗಿ ಖಾರ ತಿನಿಸು ಅಥವಾ ಸಿಹಿ ತಿನಿಸಿಗೆ ತಲಾ ರೂ.5000/- ಬಹುಮಾನವಿರುತ್ತದೆ. ಜಿಲ್ಲಾಮಟ್ಟದಲ್ಲಿ ಪ್ರಥಮ ಬಹುಮಾನ ಪಡೆದವರು ಡಿಸೆಂಬರ್ 23ರಂದು ಬೆಂಗಳೂರಿನಲ್ಲಿ ಏರ್ಪಡಿಸುವ ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕು.

ಖಾದ್ಯವನ್ನು ತಯಾರಿಸಲು ಬೇಕಾಗುವ ಸಾಮಗ್ರಿಗಳನ್ನು ತಾವೇ ತೆಗೆದುಕೊಂಡು, ನಿಗದಿತ ಸ್ಥಳ ಹಾಗೂ ಸಮಯದಲ್ಲಿ ಖುದ್ದಾಗಿ ಖಾದ್ಯವನ್ನು ಅಲ್ಲಿಯೇ ತಯಾರಿಸಲು ಸಿದ್ಧರಾಗಿರಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಚಿಗುರು ಕಾರ್ಯಕ್ರಮ

**ದಾವಣಗೆರೆ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಡಿಸೆಂಬರ್ 5 ರಂದು ಮಧ್ಯಾಹ್ನ 3 ಗಂಟೆಗೆ ಹಳೇಕಡ್ಲೇಬಾಳು ಗ್ರಾಮದ ಸರ್ಕಾರಿ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಚಿಗುರು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಕಡ್ಲೇಬಾಳು ಗ್ರಾ.ಪಂ ಉಪಾಧ್ಯಕ್ಷರಾದ ಎ.ಬಿ ಪ್ರಭಾಕರ್ ಕಾರ್ಯಕ್ರಮವನ್ನು ಉದ್ಘಾಟಿಸುವರು. ಗ್ರಾ.ಪಂ ಅಧ್ಯಕ್ಷರಾದ ಅಕ್ಕಮ್ಮ ಪರಮೇಶ್ವರಪ್ಪ ಅಧ್ಯಕ್ಷತೆ ವಹಿಸುವರು. ಎಸ್.ಎಸ್.ಕೇರ್ ಟ್ರಸ್ಟ್ ಲೈಫ್ ಟ್ರಸ್ಟಿ ಡಾ.ಪ್ರಭಾ ಮಲ್ಲಿಕಾರ್ಜುನ್ ವಿಶೇಷ ಆಹ್ವಾನಿತರಾಗಿರುವರು.

### ಡಿ.6ರಂದು ಡಾ.ಬಿ.ಆರ್.ಅಂಬೇಡ್ಕರ್ ಪರಿನಿರ್ವಹಣಾ ದಿನ

**ಚಿತ್ರದುರ್ಗ:** ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್‌ರವರ 67ನೇ ಪುಣ್ಯಸ್ಮರಣೆ ಡಿಸೆಂಬರ್ 6ರಂದು ಡಾ.ಬಿ.ಆರ್.ಅಂಬೇಡ್ಕರ್‌ರವರ ಪರಿನಿರ್ವಹಣಾ ದಿನವನ್ನಾಗಿ ಆಚರಿಸಲಿರುವುದರಿಂದ, ಚಿತ್ರದುರ್ಗ ನಗರಸಭೆ ಹತ್ತಿರವಿರುವ ಡಾ.ಬಿ.ಆರ್.ಅಂಬೇಡ್ಕರ್‌ರವರ ಪ್ರತಿಮೆಗೆ ಡಿ.6ರಂದು ಬೆಳಿಗ್ಗೆ 9ಕ್ಕೆ ಮಾಲಾರ್ಪಣೆ, ಪುಷ್ಪಾರ್ಚನೆ ಮಾಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲಾ ಜನಪ್ರತಿನಿಧಿಗಳು, ದಲಿತ ಸಂಘ ಸಂಸ್ಥೆಗಳ ಮುಖಂಡರು, ಸದಸ್ಯರು ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ಎಸ್‌ಆರ್‌ಎಸ್ ಕಾಲೇಜಿನಲ್ಲಿ ರಂಗತರಂಗ-2023

# ರಂಗಕಲೆಯಲ್ಲಿ ಅಡಗಿರುವ ಮೌಲ್ಯ ಇಂದಿಗೂ ಶಾಶ್ವತ

» **ಚಳ್ಳಕೆರೆ**

ನಗರದ ಎಸ್‌ಆರ್‌ಎಸ್ ಹೆರಿಟೇಜ್ ಶಾಲೆ ಮತ್ತ ಕಾಲೇಜು ರಂಗತರಂಗ-2023ರ ವರ್ಣರಂಜಿತ ಕಾರ್ಯಕ್ರಮವನ್ನು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಉದ್ಘಾಟಿಸಿದರು.

ಇತ್ತೀಚಿನ ದಿನಗಳಲ್ಲಿ ರಂಗಕಲೆ ಮತ್ತು ರಂಗಕಲೆಯ ಪರಿಕರಗಳು ಕಾಣೆಯಾಗುತ್ತಿರುವ ಸಂದರ್ಭದಲ್ಲಿ ಎಸ್‌ಆರ್‌ಎಸ್ ಹೆರಿಟೇಜ್ ಶಾಲಾ ಆಡಳಿತ ಮಂಡಳಿ ಈ ಕಾರ್ಯಕ್ರಮ ನಡೆಸುವ ಮೂಲಕ ರಂಗಕಲೆಯ ವೈವಿಧ್ಯತೆ ಮತ್ತು ಮೌಲ್ಯವನ್ನು ಹೆಚ್ಚಿಸಿದೆ. ವಿದ್ಯಾರ್ಥಿಗಳು ಪ್ರದರ್ಶಿಸಿದ ಪ್ರತಿಯೊಂದು ರಂಗತಾಲಿಂನಲ್ಲಿ ಪರಿಕತ್ವವಾದ ಕಲೆ ಅಡಗಿದೆ. ದೇಶವನ್ನಾಳಿದ ಅನೇಕ ಮಹಾರಾಜರ ತ್ಯಾಗ, ಬಲಿದಾನಗಳು, ಚಿಂತನೆಗಳನ್ನು ಸಹಕಾರಗೊಳಿಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳ ಅಭಿನಯ ಮನಸೂರೆಗೊಂಡಿತು. ಕಲೆಗೆ ತನ್ನದೇಯಾದ ವಿಶೇಷತೆ ಮತ್ತು ಶಕ್ತಿ ಇದೆ. ಅದನ್ನು ಬಳಸಿಕೊಳ್ಳುವಲ್ಲಿ





ನಾವು ಹಿಂದೇಟು ಹಾಕುತ್ತಿದ್ದೇವೆ. ಆದರೆ ಇಂದಿನ ರಂಗತರಂಗ ಒಂದು ಹೊಸ ಆಯಾಮವನ್ನು ಸೃಷ್ಠಿ ಮಾಡಿದೆ ಎಂದರು.

ಪ್ರಾಸ್ತಾವಿಕವಾಗಿಮಾತನಾಡಿದಸಂಸ್ಥೆಯ ಆಡಳಿತಾಧಿಕಾರಿ ಪಿ.ಎನ್.ಕೃಷ್ಣಪ್ರಸಾದ್, ರಂಗತರಂಗ-2023 ರಂಗಕಲೆಯ ಬಗ್ಗೆ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮವಾಗಿದೆ. ಇಂದು ಈ ಕಲೆ ಬಹುತೇಕ ಎಲ್ಲಾ ಕಡೆ ಮರೆಯಾಗುತ್ತಿರುವ ಸಂದರ್ಭದಲ್ಲಿ ನಮ್ಮಸಂಸ್ಥೆ ಈ ಕಲೆಯ ಮಹತ್ವವನ್ನು ವಿದ್ಯಾರ್ಥಿಗಳ ವೃಂದ ಅರಿಯಬೇಕು ಎಂಬ ಮಹದಾಸೆಯಿಂದ ನಮ್ಮ ಶಿಕ್ಷಣ ಸಂಸ್ಥೆ ಈ ಕಾರ್ಯಕ್ರಮ ಹಮ್ಮಿಕೊಂಡಿದೆ. ಶಾಲೆಯ ಕಲಾ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಶಿಕ್ಷಕ ಸಮೂಹ ರಂಗಕರಿಕರಗಳನ್ನು ಪತ್ತೆಹಚ್ಚಿ ಅವುಗಳನ್ನು ತಂದು ಇಂದಿನ ಕಾರ್ಯಕ್ರಮದಲ್ಲಿ ಅರ್ಥಗರ್ಭಿತವಾಗಿ ಎಲ್ಲವನ್ನೂ ಸಾದಾರಪಡಿಸಲಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ಬಿ.ಎ.ಲಿಂಗಾರೆಡ್ಡಿ, ರಂಗಕಲೆ ಇಂದಿಗೂ ಸಹ ಮಾಸದ ಕಲೆಯಾಗಿದೆ. ರಂಗಕಲೆಯಲ್ಲಿ ನಾವು ಜೀವಂತಿಕೆಯನ್ನು ಕಾಣಬಹುದು. ಇಂದಿನ ಪ್ರದರ್ಶನದಲ್ಲಿ ವಿದ್ಯಾರ್ಥಿಗಳು ಪ್ರದರ್ಶಿಸಿದ ಎಲ್ಲಾ ಪ್ರದರ್ಶನದಲ್ಲಿ ರಂಗಕಲೆಯ ಬಗ್ಗೆ ವಿಶ್ವಾಸ, ಅಭಿಮಾನ ವ್ಯಕ್ತವಾಗಿದೆ. ಇಂತಹ ಅಪರೂಪರ ಕಾರ್ಯಕ್ರಮವನ್ನು ನಡೆಸಲು ಸಹಕರಿಸಿದ ಎಲ್ಲರಿಗೂ ಧನ್ಯವಾದ ಅರ್ಪಿಸುವುದಾಗಿ ತಿಳಿಸಿದರು. ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ಸುಜಾತಲಿಂಗಾರೆಡ್ಡಿ, ಉಪಾಧ್ಯಕ್ಷ ಬಿ.ಎಲ್.ಅಮೋಘ, ಪ್ರಾಂಶುಪಾಲರಾದ ಬಿ.ಎಸ್.ವಿಜಯ್, ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಚಿತ್ರದುರ್ಗ, ದಾವಣಗೆರೆ ಜಿಲ್ಲೆಗಳಲ್ಲಿ ಮೆಕ್ಕೆಜೋಳ ಖರೀದಿ ಕೇಂದ್ರ

» ಚಿತ್ರದುರ್ಗ

ರಾಜ್ಯ ಸರ್ಕಾರದ ಅಧಿಸೂಚನೆಯನ್ವಯ ಮೆಕ್ಕೆಜೋಳ ಬೆಳೆದ ರೈತರಿಗೆ ನೆರವಾಗಲು, ಕರ್ನಾಟಕ ಹಾಲು ಮಹಾಮಂಡಳಿಯು ರೈತರಿಂದ ಮೆಕ್ಕೆಜೋಳವನ್ನು ನೇರವಾಗಿ ಪ್ರತಿ ಕ್ವಿಂಟಾಲ್‌ಗೆ ರೂ.2250/– ಬೆಲೆಯಲ್ಲಿ ಖರೀದಿಸಲು ಕ್ರಮಕೈಗೊಂಡಿದೆ. ಮೆಕ್ಕೆಜೋಳ ಬೆಳೆದಿರುವ ಆಸಕ್ತ ರೈತರು ಸಮೀಪದ ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಒಂದು ಕೆ.ಜಿ. ಪ್ರಮಾಣದಷ್ಟು ಮೆಕ್ಕೆಜೋಳದ ಮಾದರಿ ನೀಡಿ, ಪ್ರೂಟ್ಸ್ ತಂತ್ರಾಂಶದಲ್ಲಿ ನೊಂದಾವಣೆಯಾಗಿರುವ ಸಂಖ್ಯೆಯೊಂದಿಗೆ ನೊಂದಾಯಿಸಿಕೊಳ್ಳಬಹುದಾಗಿದೆ. ನೊಂದಣೆ ಪ್ರಕ್ರಿಯೆಯು ಈಗಾಗಲೇ ನ.13 ರಿಂದ ಪ್ರಾರಂಭವಾಗಿದ್ದು, ದಾವಣಗೆರೆ ಹಾಗೂ ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯ ರೈತರಿಗೆ ಸಾಗಾಣಿಕಾ ವೆಚ್ಚದ ಹೊರೆಯನ್ನು ತಗ್ಗಿಸುವ ಸಲುವಾಗಿ, ಮಹಾಮಂಡಳವು ದಾವಣಗೆರೆ ಹಾಗೂ ಚಿತ್ರದುರ್ಗ ಜಿಲ್ಲೆಗಳಲ್ಲಿ ಮೆಕ್ಕೆಜೋಳ ಖರೀದಿ ಕೇಂದ್ರಗಳನ್ನು ತೆರೆದಿರುತ್ತದೆ. ಪ್ರಾಥಮಿಕ ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಪ್ರಸ್ತುತ ಬಳಕೆ ಮಾಡುತ್ತಿರುವ ಕ್ಷೀರಸಿರಿ ಮತ್ತು ಸರಕಾರದ ಕೃಷಿ ಇಲಾಖೆ ಸಿದ್ಧಪಡಿಸಿರುವ ತಂತ್ರಾಂಶದ ಮೂಲಕ ಮೆಕ್ಕೆಜೋಳ ಖರೀದಿ ಪ್ರಕ್ರಿಯೆಯನ್ನು ಅನುಷ್ಠಾನಕ್ಕೆ ತರುತ್ತಿದೆ. ಪ್ರತಿ ಒಬ್ಬ ರೈತರಿಂದ ಗರಿಷ್ಠ 1000 ಕ್ವಿಂಟಾಲ್ ಮೆಕ್ಕೆಜೋಳ ಸರಬರಾಜಿಗೆ ಸೀಮಿತಗೊಳಿಸಿದ್ದು, ದಾವಣಗೆರೆ ಜಿಲ್ಲೆಗೆ ಸಂಬಂಧಿಸಿದಂತೆ, ಹೆಚ್ಚಿನ ಮಾಹಿತಿಗಾಗಿ ಆಸಕ್ತ ರೈತರು ಡಾ. ಎಸ್.ಎಂ.ಮೂರ್ತಿ, ವ್ಯವಸ್ಥಾಪಕರು (ಶೇಮತಾಂ) –77609805

### ಎಸ್‌ಎಂಎಸ್ ಮೂಲಕ ಮೇಲ್ಮನವಿಗೆ ಅವಕಾಶ

» ಚಿತ್ರದುರ್ಗ

ಸಕಾಲ ಅಧಿಸೂಚಿತ ಸೇವೆಗಳ ಅಡಿಯಲ್ಲಿ ಸಲ್ಲಿಸುವ ಅರ್ಜಿಗಳು ತಿರಸ್ಕೃತಗೊಂಡಿದ್ದರೆ ಅಂತಹವರ ನೊಂದಾಯಿತ ಮೊಬೈಲ್ ಸಂಖ್ಯೆಗೆ ಪ್ರಥಮ ಮೇಲ್ಮನವಿ ಸಲ್ಲಿಸಲು ಅನುಕೂಲವಾಗುವಂತೆ ಲಿಂಕ್‌ಗಳನ್ನು ಕಳುಹಿಸುವ ವ್ಯವಸ್ಥೆಯನ್ನು ಸಕಾಲ ಮಿಷನ್ ರಾಜ್ಯದಲ್ಲಿ ಜಾರಿಗೆ ತಂದಿದೆ. ಅರ್ಜಿ ತಿರಸ್ಕೃತಗೊಂಡಿದ್ದಲ್ಲಿ ಅರ್ಜಿದಾರರು ಸಕ್ಷಮ ಪ್ರಾಧಿಕಾರಿಗೆ ಪ್ರಥಮ ಮೇಲ್ಮನವಿ ಸಲ್ಲಿಸಲು ಸಕಾಲ ಮಿಷನ್ ಅವಕಾಶ ಕಲ್ಪಿಸಿದೆ. ನಾಗರೀಕರು ಈ ಅವಕಾಶವನ್ನು ಪರಿಣಾಮಕಾರಿಯಾಗಿ ಹಾಗೂ ಸುಲಭವಾಗಿ ಬಳಸಿಕೊಳ್ಳಲು ಅನುವು ಮಾಡಿಕೊಡುವ ಉದ್ದೇಶದಿಂದ ಅಪೀಲು ಹಾಕಲು ಲಿಂಕ್‌ನ್ನು ಎಸ್‌ಎಂಎಸ್ ಮೂಲಕ ಕಳುಹಿಸುವ ವ್ಯವಸ್ಥೆ ಮಾಡಲಾಗಿದೆ ಎಂದು ಸಕಾಲ ಮಿಷನ್‌ನ ಹೆಚ್ಚುವರಿ ಯೋಜನಾ ನಿರ್ದೇಶಕಿ ಪಲ್ಲವಿ ಆಕುರಾತಿ ಅವರು ತಿಳಿಸಿದ್ದಾರೆ.ತಿರಸ್ಕೃತಗೊಂಡ ಅರ್ಜಿಗಳಿಗೆಸಂಬಂಧಿಸಿದಂತೆಸ್ವಯಂಚಾಲಿತವಾಗಿ ಎಸ್‌ಎಂಎಸ್ ಕಳುಹಿಸುವ ಸೇವೆಯನ್ನು ಕಳೆದ ಸೆಪ್ಟೆಂಬರ್ ತಿಂಗಳಿನಿಂದ ಚಾಲನೆಗೊಳಿಸಿದೆ. ವಿದ್ಯುನ್ಮಾನ ನಾಗರೀಕ ಸೇವಾ ವಿತರಣಾ ನಿರ್ದೇಶನಾಲಯದಿಂದ ಇದುವರೆಗೆ ಒಟ್ಟು 3,18,420 ಎಸ್‌ಎಂಎಸ್‌ಗಳನ್ನು ಕಳುಹಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.ಸಾರಿಗೆ ಇಲಾಖೆಯಲ್ಲಿ ಅರ್ಜಿಗಳ ಮಾಹಿತಿಯನ್ನು ಸಕಾಲ ತಂತ್ರಾಂಶಕ್ಕೆಮ್ಯಾನ್ಯುಯಲ್ ಆಗಿಪುಶ್ ಮಾಡುತ್ತಿದ್ದು, ಇದನ್ನು ಆಟೋಪುಷ್‌ಗೆ ಬದಲಾಯಿಸಲಾಗಿದೆ. ಇದರಿಂದ, ಸಕಾಲದಲ್ಲಿ ಬಾಕಿ ಇದ್ದ ಅರ್ಜಿಗಳ ಸಂಖ್ಯೆಯು ಗಣನೀಯವಾಗಿ ಇಳಿಕೆಗೊಂಡು 9691 ರಿಂದ 2682 ಗಳಿಗೆ ಇಳಿಕೆಯಾಗಿದೆ ಎಂದು ಪಲ್ಲವಿ ಅವರು ತಿಳಿಸಿದ್ದಾರೆ.ದಿನದಿಂದ ದಿನಕ್ಕೆ ಜನಪ್ರಿಯವಾಗುತ್ತಿರುವ ಸಕಾಲ ಯೋಜನೆಯಡಿ ಅರ್ಜಿ ಸಲ್ಲಿಸುತ್ತಿರುವವರ ಸಂಖ್ಯೆಯನ್ನು ಗಮನಿಸಿ ಸಕಾಲ ಮಿಷನ್ ಹೊಸ ಹೊಸ ಸೇವೆಗಳನ್ನು ಸೇರ್ಪಡೆಗೊಳಿಸುತ್ತಿದೆ. ಕಳೆದ ಮೂರು ತಿಂಗಳ ಅವಧಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅಸ್ತಿತ್ವದಲ್ಲಿರುವ ದೂರ ಸಂಪರ್ಕ ಮೂಲಸೌಕರ್ಯ ಗೋಪುರಕ್ಕೆ ಅನುಮತಿ/ನಿಯಮಿತಗೊಳಿಸುವಿಕೆ ಮತ್ತು ಹೊಸ/ಅಸ್ತಿತ್ವದಲ್ಲಿರುವ ಓವರ್‌ಗ್ರೌಂಡ್ ಕೇಬಲ್‌ಮೂಲಸೌಕರ್ಯ/ಭೂಗತ ಕೇಬಲ್ ಮೂಲಸೌಕ ರ್ಯಕ್ಕಾಗಿ ಅನುಮತಿ/ಯಮಿತಗೊಳಿಸುವಿಕೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.ಅಲ್ಪ ಸಂಖ್ಯಾತರ ಇಲಾಖೆಯಿಂದ ರಾಷ್ಟ್ರೀಯ ವಿದೇಶಿ ವಿದ್ಯಾರ್ಥಿವೇತನ ಯೋಜನೆ, ಎಂಫಿಲ್ ಮತ್ತು ಪಿಹೆಚ್‌ಡಿ ಫೆಲೋಶಿಪ್ ಯೋಜನೆ ಹಾಗೂ ಐಐಟಿ, ಐಐಎಂ, ಐಐಎಸ್‌ಸಿ ಸಂಸ್ಥೆಗಳಲ್ಲಿ ಪ್ರವೇಶ ಪಡೆದಿರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಉತ್ತೇಜನ ನೀಡುವ ಯೋಜನೆಗಳನ್ನು ಸಹ ಸಕಾಲದ ಅಡಿಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಮಾಡಿದೆ ಎಂದು ಆಕುರಾತಿ ಅವರು ತಿಳಿಸಿದ್ದಾರೆ. ಮಾಹಿತಿ ತಂತ್ರಜ್ಞಾನ ಇಲಾಖೆಯಿಂದ ಸ್ಟಾರ್ಟ್ ಅಪ್ ನೋಂದಣಿ ಮತ್ತು ಗೃಹ ಇಲಾಖೆಯಿಂದ ಬಾಡಿಗೆದಾರರ ಪೂರ್ವಾಪರ ಪರಿಶೀಲನೆ ಸೇರಿದಂತೆ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯಿಂದ ಉದ್ಯೋಗಾಕಾಂಕ್ಷಿಯ ನೋಂದಣಿ ದಾಖಲೆಯ ವರ್ಗಾವಣೆ, ಉದ್ಯೋಗಾಕಾಂಕ್ಷಿಗಳ ನೋಂದಣಿ, ಉದ್ಯೋಗಾಕಾಂಕ್ಷಿಗಳ ಮರುನೋಂದಣಿ ಮತ್ತು ಉದ್ಯೋಗಾಕಾಂಕ್ಷಿಗಳ ನೋಂದಣಿ ಪತ್ರದ ನವೀಕರಣ ಯೋಜನೆಗಳನ್ನು ಸಹ ಸಕಾಲ ವ್ಯಾಪ್ತಿಗೆ ತರಲಾಗಿದೆ ಎಂದು ಸಕಾಲ ಮಿಷನ್ ಹೆಚ್ಚುವರಿ ಯೋಜನಾ ನಿರ್ದೇಶಕರು ತಿಳಿಸಿದ್ದಾರೆ.

## ಸಿರಿಧಾನ್ಯ ಕೃಷಿ ಮೇಳ ಇಲ್ಲಿ ನಡೆದದ್ದೆ ಸಕತ್ ಜೋರು

# ಸಿರಿಧಾನ್ಯ ಉತ್ಪನ್ನಗಳದ್ದೇ ಕಾರುಬಾರು

» ನಾಗತಿಹಳ್ಳಿಮಂಜುನಾಥ್





ಹೊಸದುರ್ಗ: ಈಗಾಗಲೆ ಹೊಸದುರ್ಗ ತಾಲೂಕು ಎಂಬುದು "ಸಿರಿಧಾನ್ಯಗಳ ತವರೂರು" ಎಂಬ ಹೆಸರು ಪಡೆದಿದೆ ಹೌದು

ಇಡೀ ರಾಜ್ಯದಲ್ಲೆ ಸಿರಿಧಾನ್ಯಗಳನ್ನ ಹೆಚ್ಚು ಬೆಳೆಯುವ ತಾಲೂಕು ಯಾವುದಾದರು ಇದೆ ಎಂದರೆ ಅದು ಹೊಸದುರ್ಗ ತಾಲೂಕು ಮಾತ್ರ ಸಿರಿಧಾನ್ಯ ವಿಚಾರದಲ್ಲಿ ನಮ್ಮ ಹೊಸದುರ್ಗ ತಾಲೂಕು ಎಂಬುದು ರಾಜ್ಯದಲ್ಲೆ ಮನೆ ಮಾತಾಗಿದೆ ಈಮಾತನ್ನು ನಾನು ಹೇಳುತ್ತಿಲ್ಲ ಕೃಷಿ ವಿಜ್ಞಾನಿಗಳೆ ಹೇಳುತ್ತಾರೆ.

ತಾಲ್ಲೂಕಿನ ಕೆಲ್ಲೋಡಿನ ಕನಕಧಾಮದ ಶ್ರೀಮಠದ ಆವರಣದಲ್ಲಿ ಕನಕ ಜಯಂತಿ ಅಂಗವಾಗಿ ಒಟ್ಟು ಮೂರು ದಿನಗಳ ವಿನೂನತ ಕಾರ್ಯಕ್ರಮಗಳನ್ನ ಆಯೋಜನೆ ಮಾಡಲಾಗಿತ್ತು ಇಂತಹ ಕಾರ್ಯಕ್ರ ಮಗಳಲ್ಲಿ ಒಂದು ದಿನದ ಕಾರ್ಯಗಾರವಾಗಿ ಸಿರಿಧಾನ್ಯದ ಬಗ್ಗೆ ಕೃಷಿ ಅಧಿಕಾರಿ ಈಶ ಅವರ ನೇತೃತ್ವದಲ್ಲಿ ಇಲಾಖೆಯವರು ಆಯೋಜನೆ ಮಾಡಿ ಸಿರಿಧಾನ್ಯ ಕೃಷಿ ವಸ್ತು ಪ್ರದರ್ಶನ ಕಾರ್ಯಕ್ರಮವನ್ನ ಆಯೋಜನೆ ಮಾಡಲಾಗಿತ್ತು ಈ ಕಾರ್ಯಕ್ರಮದಲ್ಲಿ ಸಿರಿಧಾನ್ಯ ಉತ್ಪನ್ನಗಳಿಗೆ ಬೇಡಿಕೆ ಹೆಚ್ಚಿದ್ದು, ಖರೀದಿದಾರರ ಸಂಖ್ಯೆ ಬಲು ಜೋರಾಗಿ ಇದ್ದುದ್ದನ್ನ ನೋಡಲು ಎರಡು ಕಣ್ಣಗಳು ಸಾಲದಾದವು ಎಂಬಂತಾಯಿತು.

ತಾಲ್ಲೂಕಿನ ವಿವಿಧ ಮಹಿಳಾ ಸ್ವಸಹಾಯ ಸಂಘ ಗುಂಪಿನ ಸದಸ್ಯರು ಸಿರಿಧಾನ್ಯ ಉತ್ಪನ್ನಗಳನ್ನು ತಯಾರಿಸಿ, ಮಾರಾಟ ಮಾಡುತ್ತಿದ್ದರು. ಈ ಕೃಷಿ ಮೇಳದಲ್ಲಿ ಹೆಚ್ಚುತ್ತಿವೆ ಜನಸಂಖ್ಯೆ ಸಿರಿಧಾನ್ಯ ಉತ್ಪನ್ನಗಳನ್ನು ಕೊಂಡು ಹೋಗಿದ್ದಾರೆ. ಈ ರೀತಿಯ ಇನ್ನಷ್ಟು ಅವಕಾಶಗಳು ದೊರೆತರೆ, ಮಹಿಳಾ ಸಂಘಗಳಿಗೆ ಅನುಕೂಲವಾಗುತ್ತದೆ ಎಂದು ಒನಕೆ ಓಬವ್ವ ಮಹಿಳಾ ಸ್ವಸಹಾಯ ಸಂಘದ ಸುಮ ಅಭಿಪ್ರಾಯ ವ್ಯಕ್ತಪಡಿಸಿದರು.

ಒಂದೆಡೆ ನಿರಂತರವಾಗಿ ನಡೆಯುತ್ತಿರುವ ವಿಚಾರ ಸಂಕಿರಣ, ಮತ್ತೊಂದು ರೈತರಿಗೆ ಅನುಕೂಲವಾಗುವಂತಹ ಎಲ್ಲಾ ಇಲಾಖೆಗಳ ಮಾಹಿತಿಗೆ ಕೊರತೆಯಿರಲಿಲ್ಲ. ಕೃಷಿ ಉಪಕರಣಗಳು, ಸಿರಿಧಾನ್ಯಗಳ ಉಪಯೋಗ, ಮೌಲ್ಯವರ್ಧನೆ, ಆರೋಗ್ಯಕರ ಅಂಶಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮೀನುಗಾರಿಕೆ, ತೋಟಗಾರಿಕೆ, ರೇಷ್ಮೆ ಸೇರಿದಂತೆ ಹಲವು ಇಲಾಖೆಗಳಲ್ಲಿ ಸೌಲಭ್ಯಗಳು, ಆರೋಗ್ಯಕರ ಅಂಶಗಳ ಬಗ್ಗೆ ಮಾಹಿತಿ ಇತ್ತು. ಕರ್ನಾಟಕ ಸಿರಿಧಾನ್ಯಗಳ ಬೆಳೆಗಳಲ್ಲಿ ಮುಂಚೂಣಿಯಲ್ಲಿರುವ ರಾಜ್ಯಗಳಲ್ಲಿ ಒಂದಾಗಿದೆ. ವಿಶ್ವಸಂಸ್ಥೆಯು ಗೊತ್ತುಪಡಿಸಿದ 2023 ನೇ ವರ್ಷವನ್ನು 'ಅಂತಾರಾಷ್ಟ್ರೀಯ ಸಿರಿಧಾನ್ಯಗಳ ವರ್ಷ' ಎಂದು ಆಚರಿಸುವ ಪ್ರಯತ್ನದ ಭಾಗವಾಗಿ, ಜನರಲ್ಲಿ ಅದರ ಬಳಕೆಯನ್ನು ಹೆಚ್ಚಿಸುವ ಮೂಲಕ ಬೆಳೆಯನ್ನು ಉತ್ತೇಜಿಸಲು ಸರ್ಕಾರ ಯೋಜಿಸುತ್ತಿದೆ. ಮಕ್ಕಳು ಮತ್ತು ಯುವಕರಲ್ಲಿ ಸಿರಿಧಾನ್ಯಗಳ ಬಳಕೆಯ ವಿಶೇಷ ಅರಿವು ಮೂಡಿಸುವುದು ಮತ್ತು ರೈತರಿಗೆ ಉತ್ತಮ ಆದಾಯವನ್ನು ಪಡೆಯಲು ಸಹಾಯ ಮಾಡುವುದು ಕೂಡ ಇದರ ಉದ್ದೇಶವಾಗಿದೆ ಎಂಬುದು ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ ಅವರ ಅಭಿಪ್ರಾಯವಾದರೆ ಸಿರಿಧಾನ್ಯಕ್ಕೆ ಈಗ ಬೇಡಿಕೆ ಹೆಚ್ಚಾಗಿದ್ದು ಪೂರೈಕೆ ಕಡಿಮೆಯಿದೆ. ಸಿರಿಧಾನ್ಯ ಮೌಲ್ಯವರ್ಧನೆ ಮಾಡಿ ಮಾರಾಟ ಮಾಡುವ ಮೂಲಕ ಮೂಲ ಸ್ವಸಹಾಯ ಸಂಘಗಳಿಗೆ ಧಾನ್ಯ ಖರೀದಿಸಿ ಮೌಲ್ಯವರ್ಧನೆ ಮಾಡಲು ಪ್ರೋತ್ಸಾಹ ನೀಡಬೇಕು ರೈತರು ಉತ್ಪಾದಿಸುವ ಜೊತೆಗೆ ಮೌಲ್ಯವರ್ಧಿತ ಮಾರಾಟ ಮಾಡುವ ಮೂಲಕ ಲಾಭ ಪಡೆಯಬೇಕು ಎಂದು ರಾಜ್ಯ ಮಟ್ಟದ ಸಂಪನ್ಮೂಲ ವ್ಯಕ್ತಿ ಯೋಗೀಶ್ ಅಪ್ಪಾಜಯ್ಯ ಅವರು ರೈತರಿಗೆ ಹೇಳುವ ಅಮೂಲ್ಯವಾದ ಮಾತುಗಳ ನೀತಿ ಹಾಗೂ ಪ್ರಾಪಂಚಿಕ ಪ್ರಜ್ಞಾ ಪಾಠವಾದರೆ ಕರಿಬೇವು, ಹೊನ್ನೆ, ಬೀಟೆ, ಮಹಾಗನಿ, ನುಗ್ಗೆ ರಕ್ತಚಂದನ, ಹಲಸು, ಗಸಗಸೆ ಸೇರಿದಂತೆ ಸುಮಾರು 250 ಕ್ಕೂ ಅಧಿಕ ಸಸಿಗಳನ್ನು ರೈತರಿಗೆ ಉಚಿತವಾಗಿ ನೀಡಲಾಗಿದೆ. ರಕ್ತಚಂದನ, ಕರಿಬೇವು ಮತ್ತು ಗಸಗಸೆ ಸಸಿಗಳಿಗೆ ಬೇಡಿಕೆ ಹೆಚ್ಚಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ರೈತರು ಭಾಗವಹಿಸಿ, ಮಾಹಿತಿ ಪಡೆದಿದ್ದಾರೆ ಎಂದು ಗಸ್ತು ಅರಣ್ಯಾಧಿಕಾರಿ ರಮೇಶ್ ಹೆಚ್.ಎಂ. ಮಾಹಿತಿ ಹಂಚಿಕೊಂಡಿದ್ದಾರೆ.

ಇನ್ನು ಹತ್ತು ಹಲವಾರು ಸಿರಿಧಾನ್ಯಗಳ ಮಳಿಗೆಗಳನ್ನು ವೀಕ್ಷಣೆ ಮಾಡುವ ಸಂಧರ್ಬ ದಲ್ಲಿ ಮಾತಿಗೆ ಸಿಕ್ಕಿದ್ದು ಒನಕೆ ಓಬವ್ವ ಸ್ತ್ರೀ ಶಕ್ತಿ ಸ್ವಸಹಾಯ ಸಂಘ ಆಧ್ರಿಕಟ್ಟೆ ಗ್ರಾಮದ ಶೋಭಾ ಇವರು ಹೇಳುತ್ತಾರೆ, ನಮ್ಮ ಸ್ವಸಹಾಯ ಸಂಘದಲ್ಲಿ ತಯಾರಿಸುವ ಉತ್ಪನ್ನಗಳಿಗೆ ಇತರೆ ಜಿಲ್ಲೆಗಳಿಂದಲೂ ಸಹ ಬೇಡಿಕೆಯಿದೆ. ಇಂದಿನ ಕೃಷಿ ಮೇಳದಲ್ಲಿ ರಾಗಿ ಅವಲಕ್ಕಿ ಬಹುಬೇಗ ಖಾಲಿಯಾಯಿತು. ಸಿರಿಧಾನ್ಯಗಳಿಂದ ತಯಾರಿಸಿದ ರೊಟ್ಟಿ ಹಾಗೂ ಚಟ್ನಿಪುಡಿಗಳಿಗೆ ಬೇಡಿಕೆ ಹೆಚ್ಚಿದೆ. ಎಂದು ಒಟ್ಟಾರೆ ಮೇಳ ಇಲ್ಲಿ ಅತ್ಯಂತ ಯಶಸ್ವಿಯಾಗಿದ್ದೆ ಸಂತಸದ ವಿಷಯ.



» ಈಶ್ವರಾನಂದಪುರಿ ಸ್ವಾಮೀಜಿ, ಕನಕ ಗುರುಪೀಠ, ಕೆಲ್ಲೋಡು

ರಾಜ್ಯದಲ್ಲಿಯೇ ಹೊಸದುರ್ಗದಲ್ಲಿ ಬೆಳೆಯುವ ಸಿರಿಧಾನ್ಯ ಹೆಚ್ಚು ಪ್ರಸಿದ್ಧಿ ಪಡೆದಿದೆ. ಇಲ್ಲಿ ಬೆಳೆಯುವ ಸಿರಿಧಾನ್ಯ ಹೊರ ರಾಜ್ಯಗಳಿಗೂ ತಲುಪುತ್ತಿದೆ ಅಂದ ಮೇಲೆ ಇದರ ಮಹತ್ವ ಎಷ್ಟಿದೆ ಎಂಬುದನ್ನು ಅರ್ಥ ಮಾಡಿಕೊಳ್ಳಬೇಕು. ನಾವು ಬೆಳೆಯುವ ಸಿರಿಧಾನ್ಯವನ್ನು ನಾವು, ನಮ್ಮ ಕುಟುಂಬ ಬಳಸಬೇಕು. ಸಿರಿಧಾನ್ಯಗಳಿಗೆ ನಾವೇ ಬ್ರಾಂಡ್ ಸೃಷ್ಟಿಸಿ ಮಾರಾಟ ಮಾಡಬೇಕು. ಮೌಲ್ಯವರ್ಧನೆ ಮಾಡಿಕೊಂಡು ಹೆಚ್ಚಿನ ಲಾಭಾಂಶ ಪಡೆದುಕೊಳ್ಳಬೇಕು.



» ಬಿ.ಜಿ.ಗೋವಿಂದಪ್ಪ, ಶಾಸಕರು. ಹೊಸದುರ್ಗ ವಿಧಾನ ಸಭಾ ಕ್ಷೇತ್ರ

ಇತ್ತೀಚಿನ ದಿನಗಳಲ್ಲಿ ಕೃಷಿ ಕ್ಷೇತ್ರದಲ್ಲಿ ಬರುತ್ತಿರುವ ರೋಗ ಭಾದೆಗಳ ಕುರಿತು ರೈತರಿಗೆ ಬೇಕಾದ ಸಮಗ್ರ ಮಾಹಿತಿಯ ಕುರಿತಂತೆ ತರಬೇತಿ ನೀಡಲು ಇಂತಹ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಆದರೆ ಇಂತಹ ಕಾರ್ಯಕ್ರಮಗಳಿಗೆ ಹೆಚ್ಚು ರೈತರು ಭಾಗಿಯಾಗುತ್ತಿಲ್ಲ. ಸಿರಿಧಾನ್ಯಗಳಲ್ಲಿ ಪೌಷ್ಠಿಕ ಆಹಾರ ಇದೆ. ತಾಲೂಕಿನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಸಿರಿಧಾನ್ಯ ಬೆಳೆಯಲಾಗುತ್ತಿದೆ. ಹೊರ ರಾಜ್ಯಗಳಲ್ಲಿಯೂ ಸಿರಿಧಾನ್ಯಗಳಿಗೆ ಸಾಕಷ್ಟು ಬೇಡಿಕೆಯಿದೆ. ಮಧು ಮೇಹಿಗಳು ಹೆಚ್ಚಿನ ಆಸಕ್ತಿ ವಹಿಸಿ ಸಿರಿಧಾನ್ಯ ಬಳಸುತ್ತಾರೆ.



» ಸಿ.ಎಸ್.ಈಶ, ಸಹಾಯಕ ನಿರ್ದೇಶಕ, ಕೃಷಿ ಇಲಾಖೆ, ಹೊಸದುರ್ಗ

2023-24 ನೇ ಸಾಲಿನ ರಾಷ್ಟ್ರೀಯ ಆಹಾರ ಮತ್ತು ಪೌಷ್ಠಿಕ ಭದ್ರತೆ-ನ್ಯೂಟ್ರಿ ಸಿರಿಧಾನ್ಯಗಳ ಯೋಜನೆಯಡಿ ಜಿಲ್ಲಾ ಮಟ್ಟದ ಸಿರಿಧಾನ್ಯ ಹಬ್ಬ ಕಾರ್ಯಕ್ರಮದಡಿ ಸಿರಿಧಾನ್ಯ ಮತ್ತು ಕೃಷಿ ವಸ್ತು ಪ್ರದರ್ಶನ ಹಾಗೂ "ಸಿರಿಧಾನ್ಯಗಳ ಬಗ್ಗೆ ಅರಿವು ಮೂಡಿಸುವ ಜಾಥಾ ಕಾರ್ಯಕ್ರಮ ಸಿರಿಧಾನ್ಯಗಳ ಹಬ್ಬದ ಅಂಗವಾಗಿ ಕೃಷಿ ವಸ್ತು ಪ್ರದರ್ಶನ ಹಾಗೂ ಕೃಷಿ ವಿಜ್ಞಾನಿಗಳಿಂದ ಸಿರಿಧಾನ್ಯದ ಮಹತ್ವ, ಮೌಲ್ಯವರ್ಧನೆ ಬಗ್ಗೆ ವಿಚಾರ ಗೋಷ್ಠಿ ಕಾರ್ಯಕ್ರಮ ಹಾಗೂ ಸಿರಿಧಾನ್ಯಗಳ ಮಾರುಕಟ್ಟೆ, ಮೌಲ್ಯವರ್ಧನೆ ಹಾಗೂ ಸಿರಿಧಾನ್ಯಗಳ ಸಂಸ್ಕರಣೆ ಕುರಿತು ಮಾರುಕಟ್ಟೆ ಕಾರ್ಯಗಾರವನ್ನು ಆಯೋಜಿಸಲಾಗಿತ್ತು ತಾಲ್ಲೂಕಿನ ಸಾಕಷ್ಟು ರೈತ ಭಾಂಧವರು ಈ ಕಾರ್ಯಕ್ರಮದಲ್ಲ ಭಾಗವಹಿಸಿ.

## ವಿದ್ಯಾರ್ಥಿ ನಿಲಯದಲ್ಲಿ ಮೂಲಭೂತ ಸೌಲಭ್ಯಕ್ಕೆ ಒತ್ತಾಯಿಸಿ ಕಾನೂನು ವಿದ್ಯಾರ್ಥಿಗಳಿಂದ ಪ್ರತಿಭಟನೆ

» ಚಿತ್ರದುರ್ಗ



ವಿದ್ಯಾರ್ಥಿ ನಿಲಯದ ಸೌಲಭ್ಯಗಳ ಕೊರತೆ ಹಿನ್ನೆಲೆ ಸಮಾಜ ಕಲ್ಯಾಣ ಇಲಾಖೆ ಕಚೇರಿ ಬಳಿ ಕಾನೂನು ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದರು.ಇಂದು ಸರಸ್ವತಿ ಕಾನೂನು ಕಾಲೇಜಿನ ವಿದ್ಯಾರ್ಥಿಗಳಿಗೆ ನಗರದ ದವಳಗಿರಿ ಬಡಾವಣೆಯಲ್ಲಿ ಹಾಸ್ಟೆಲ್ ವ್ಯವಸ್ಥೆ ಇದ್ದು ಆ ಹಾಸ್ಟೆಲ್‌ನಲ್ಲಿ ಮೂಲಭೂತ ಸೌಲಭ್ಯಗಳ ಇಲ್ಲದಿರುವುದಾಗಿ ಆರೋಪಿಸಿದ ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಇಲಾಖೆ ಕಚೇರಿ ಬಳಿ ತೆರಳಿ ಪ್ರತಿಭಟನೆ ನಡೆಸಿದ್ದಾರೆ.

ಇನ್ನೂ ಹಾಸ್ಟೆಲ್‌ನಲ್ಲಿ ಬೋರ್‌ವೆಲ್ ಇರದ ಕಾರಣ ಕುಡಿಯುವ ನೀರಿನ ಸಮಸ್ಯೆ ಇದ್ದು ಟ್ಯಾಂಕರ್ ಮೂಲಕ ನೀರು ತರಿಸುತ್ತಿದ್ದು ಆ ನೀರು ಕಲುಷಿತಗೊಂಡಿರುತ್ತದೆ. ಹಾಗು ಶಾಶ್ವತ ನಿಲಯ ಪಾಲಕರ ನೇಮಕ, ಹಾಗೂ ವಿದ್ಯಾರ್ಥಿಗಳ ಕೊಠಡಿಯಲ್ಲಿ ಸರಿಯಾದ ಬೆಡ್ ಇಲ್ಲದೆ ಮಲಗಲು ಸಮಸ್ಯೆ ಉಂಟಾಗುತ್ತಿದ್ದು ಉತ್ತಮ ಬೆಡ್‌ಗಳ ವ್ಯವಸ್ಥೆ ಹಾಗೂ ಹೊದಿಕೆ ವ್ಯವಸ್ಥೆ ಮತ್ತು ಹಾಸ್ಟೆಲ್‌ನ ಗ್ರಂಥಾಲಯದಲ್ಲಿ ಪುಸ್ತಕಗಳನ್ನ ಒದಗಿಸಲು ಆಗ್ರಹಿಸಿ ಪ್ರತಿಭಟನೆ ನಡೆಸಲಾಯಿತು.

ಹಾಸ್ಟೆಲ್‌ನಲ್ಲಿ ಸುಮಾರು 120 ವಿದ್ಯಾರ್ಥಿಗಳು ಇದ್ದು ಮೂಲತಃ ಸೌಕರ್ಯಗಳ ಕೊರತೆ ಇದ್ದು ಸಮಾಜ ಕಲ್ಯಾಣ ಇಲಾಖೆ ಕಚೇರಿ ಬಳಿ ಪ್ರತಿಭಟನೆ ನಡೆಸಿದ್ದು ವಿದ್ಯಾರ್ಥಿಗಳ ಪ್ರತಿಭಟನಾ ಸ್ಥಳಕ್ಕೆ ಇಲಾಖೆ ಉಪ ನಿರ್ದೇಶಕರಾದ ಜಗದೀಶ್ ಹೆಬ್ಬಳ್ಳಿ ಅವರು ಆಗಮಿಸಿ ವಿದ್ಯಾರ್ಥಿಗಳ ಸಮಸ್ಯೆ ಆಲಿಸಿದ್ದು ಶೀಘ್ರವಾಗಿ ಸಮಸ್ಯೆಗಳನ್ನ ಬಗೆಹರಿಸುವ ಬರವಸೆಯನ್ನ ಕೊಟ್ಟಿದ್ದಾರೆ.

## ಪೋಲೀಸ್ ಠಾಣೆಗೆ ನುಗ್ಗಿ ದಾಂಧಲೆ: ಕರುನಾಡ ವಿಜಯಸೇನೆ ಪ್ರತಿಭಟನೆ




» ಚಿತ್ರದುರ್ಗ

ಕಳೆದ ಮೂವತ್ತರಂದು ಚಿಕ್ಕಮಗಳೂರಿನಲ್ಲಿ ಹೆಲ್ಮೆಟ್ ಇಲ್ಲದೆ ಬೈಕ್‌ನಲ್ಲಿ ಹೋಗುತ್ತಿದ್ದ ವಕೀಲ ಪ್ರೀತಮ್ ಮೇಲೆ ಪೋಲೀಸರು ಹಲ್ಲೆ ನಡೆಸಿರುವುದಕ್ಕೆ ಸಂಬಂಧಿಸಿದಂತೆ ಚಿಕ್ಕಮಗಳೂರು ವಕೀಲರ ಸಂಘದ ಅಧ್ಯಕ್ಷ ಸುಧಾಕರ್ ಮತ್ತು ಸಂಗಡಿಗರು ಠಾಣೆಗೆ ನುಗ್ಗಿ ದಾಂಧಲೆ ನಡೆಸಿರುವುದನ್ನು ಖಂಡಿಸಿ ಕರುನಾಡ ವಿಜಯಸೇನೆ ಕಾರ್ಯಕರ್ತರಿಂದ ಜಿಲ್ಲಾ ರಕ್ಷಣಾಧಿಕಾರಿ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಿ ಪೋಲೀಸರಿಗೂ ಪ್ರತಿಭಟಿಸುವ ಹಕ್ಕು ನೀಡುವಂತೆ ಒತ್ತಾಯಿಸಿ ಜಿಲ್ಲಾ ರಕ್ಷಣಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಪೋಲೀಸ್ ಠಾಣೆಗೆ ನುಗ್ಗಿ ಕೆಲವು ಕಿಡಿಗೇಡಿಗಳು ಎಫ್.ಐ.ಆರ್. ಹರಿದು ಹಾಕಿರುವುದು ಅಕ್ಷಮ್ಯ ಅಪರಾಧ. ಪೋಲೀಸರು ಮತ್ತು ವಕೀಲರು ಇಬ್ಬರು ಕಾನೂನು ಪರಿಪಾಲಕರು ಎನ್ನುವುದನ್ನು ಮರೆತು ಸಂಘರ್ಷಕ್ಕೆ ಇಳಿದಿರುವುದು ಸಾರ್ವಜನಿಕರಲ್ಲಿ ಕೆಟ್ಟ ಅಭಿಪ್ರಾಯ ಮೂಡಲಿದೆ. ಇಬ್ಬರ ನಡುವೆ ಬಾಂಧವ್ಯವಿರಬೇಕು ಎಂದರು.

## ಪ್ರಮುಖ ಸುದ್ದಿ

# ದಸರಾ ಅಂಬಾರಿ ಹೊತ್ತ ಅರ್ಜುನ ಕಾಳಗದಲ್ಲಿ ಬಲಿ: ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ಸಂತಾಪ

» ಚಿತ್ರದುರ್ಗ



ಎಂಟು ಬಾರಿ ಮೈಸೂರು ದಸರಾ ಅಂಬಾರಿ ಹೊತ್ತು ನಾಡಸೇವೆಯಲ್ಲಿ ಭಾಗಿಯಾಗಿದ್ದ ಅರ್ಜುನ (65) ಆನೆಯು ಸೋಮವಾರ ಕಾಡಾನೆ ಕಾರ್ಯಾಚರಣೆ ವೇಳೆ ಸಾವನ್ನಪ್ಪಿದ್ದು ನಾಡಿಗೆ ತುಂಬಲಾರದ ನಷ್ಟವಾಗಿದ್ದು ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ತೀವ್ರ ಸಂತಾಪ ಸೂಚಿಸಿದೆ.

ಈ ಹಿಂದೆ ಅನೇಕ ಪುಂಡಾನೆಗಳನ್ನು ಸೆರೆಹಿಡಿಯುವಲ್ಲಿ ಅರ್ಜುನ ಪ್ರಮುಖ ಪಾತ್ರವಹಿಸಿದ್ದ ಮತ್ತು ಸಕ್ರೆಬೈಲು ಆನೆ ಬಿಡಾರ ದಲ್ಲಿ ಅರ್ಜುನ ಹಿಡಿದ ಅನೇಕ ಕಾಡಾನೆಗಳು ಇವೆ.

22 ವರ್ಷಗಳ ಕಾಲ ದಸರಾದಲ್ಲಿ ಭಾಗವಹಿಸಿದ್ದ ಸಾಕಾನೆ ಅರ್ಜುನ 8 ಬಾರಿ ಯಶಸ್ವಿಯಾಗಿ ಅಂಬಾರಿ ಹೊತ್ತಿದ್ದ. ಜಂಬೂಸವಾರಿಯಲ್ಲಿ ನಿಶಾನೆ ಆನೆಯಾಗಿ ಅರ್ಜುನ ಭಾಗಿಯಾಗಿದ್ದು ಇಲ್ಲಿವರೆಗೂ ಆತನ ಸೇವೆ ಅವಿಸ್ಮರಣೀಯ. 288ಮೀ ಎತ್ತರ, 5800 ರಿಂದ 6000 ಕೆ.ಜಿ. ತೂಕ ಇರುವುದು ಇತ್ತೀಚೆಗೆ ದಸರಾದಲ್ಲಿ ಭಾಗವಹಿಸಿದ್ದ ಸಂದರ್ಭ ಗೊತ್ತಾಗಿತ್ತು.

ಇತ್ತೀಚೆಗೆ ಕಾಡಾನೆಗಳ ಉಪಟಳ ಹೆಚ್ಚಾಗಿತ್ತು, ಅದನ್ನು ನಿಯಂತ್ರಣ ಮಾಡಲು ಅರಣ್ಯ ಇಲಾಖೆ ಹರಸಾಹಸ ಮಾಡಿತ್ತು. ಈ ಹಿನ್ನೆಲೆಯಲ್ಲಿ ಹಾಸನ ಜಿಲ್ಲೆಯ ಸಕಲೇಶಪುರ ತಾಲ್ಲೂಕಿನ ಯಸಳೂರು ಬಳಿ ನಾಲ್ಕು ಸಾಕಾನೆಗಳೊಂದಿಗೆ ಅರಣ್ಯ ಇಲಾಖೆ ಸಿಬ್ಬಂದಿ ಹಾಗು ವೈದ್ಯರು ಕಾರ್ಯಾಚರಣೆ ಆರಂಭಿಸಿದ್ದರು. ಪುಂಡಾನೆಯನ್ನು ಸೆರೆಹಿಡಿಯಲು ಅರಿವಳಿಕೆ ಚುಚ್ಚುಮದ್ದು ನೀಡುವ ವೇಳೆ ಅರ್ಜುನನ ಮೇಲೆ ಒಂಟಿಸಲಗ ದಿಢೀರ್ ದಾಳಿ ಮಾಡಿದೆ.

ಒಂಟಿಸಲಗ ದಾಳಿ ಮಾಡುತ್ತಿದ್ದಂತೆಯೇ ಉಳಿದ ಮೂರು ಸಾಕಾನೆಗಳು ಓಡಿ ಹೋಗಿವೆ. ಆದರೆ, ಅರ್ಜುನ ಮಾತ್ರ ಒಂಟಿಸಲಗದ ಜೊತೆ ಕಾಳಗಕ್ಕಿಳಿದಿದ್ದು ಕೊನೆಯಲ್ಲಿ ಮೃತಪಟ್ಟಿರುವುದು ಈ ನಾಡಿಗೆ ತುಂಬಲಾರದ ನಷ್ಟ ಎಂದು ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ರಾಜ್ಯ ಪ್ರಧಾನ ಕಾರ್ಯದರ್ಶಿ ಮಾಲತೇಶ್ ಅರಸ್ . ರಾಜ್ಯ ಸಂಚಾಲಕ ಟಿ. ರುದ್ರಮುನಿ, ಉಪಾಧ್ಯಕ್ಷರಾದ ಅಂಬಿಕಾ, ಗ್ರೀನ್ ಕರ್ನಾಟಕ ಟೀಮ್ ಕಮಿಷನರ್ ಡಾ.ಎಂ.ಸಿ.ನರಹರಿ, ಋಷಿ ಸಂಸ್ಕೃತಿ ಗುರುಕುಲ ಮಹಾಸಂಸ್ಥಾನ ಯೋಜನಾ ನಿರ್ದೇಶಕ ಎಸ್. ರಾಘವೇಂದ್ರ, ವನ್ಯಜೀವಿ ಛಾಯಾಗ್ರಾಹಕ ನಾಗು ಆರ್ಟ್ಸ್ ನಾಗರಾಜ್, ಪ್ರಾಣಿ ಸಂರಕ್ಷಕಿ ಸ್ಫೂರ್ತಿ ಮತ್ತು ಜೋಗಿಮಟ್ಟಿ ಗೆಳೆಯರ ಬಳಗದ ಪದಾಧಿಕಾರಿಗಳು ಮತ್ತು ಅನೇಕರು ಸಂತಾಪ ಸೂಚಿಸಿದ್ದಾರೆ.

ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ರಾಜ್ಯ ಪ್ರಧಾನ ಕಾರ್ಯದರ್ಶಿ ಮಾಲತೇಶ್ ಅರಸ್ ಮಾತನಾಡಿ. ಅರ್ಜುನನು 2012 ರಿಂದ 2019 ರವರೆಗೆ (8 ವರ್ಷಗಳು) ಅಂಬಾರಿ ಹೊತ್ತಿದ್ದನು . ಮೈಸೂರು ರಾಜಮನೆತನದ ಪ್ರೀತಿಯ ಆನೆಯಾಗಿದ್ದ ಅರ್ಜುನನ ಸಾವು ಇಡೀ ನಾಡಿಗೆ ನೋವುತಂದಿದೆ. ಈಗ 60 ವರ್ಷ ಮೇಲ್ಪಟ್ಟ ಆನೆಗಳನ್ನು ನಿವೃತ್ತಿಗೊಳಿಸುವ ಸರ್ಕಾರದ ಆದೇಶದ ಮೇಲೆ ಹೆಸರನ್ನು ಕೈಬಿಡಲಾಗಿತ್ತು. ಬಳಿಕ ಅಭಿಮನ್ಯು ಅರ್ಜುನನ ಉತ್ತರಾಧಿಕಾರಿಯಾಗಿ ಅಂಬಾರಿ ಹೊರುತ್ತಿದ್ದಾನೆ. ಇದೀಗ ಅರ್ಜುನನ ಸಾವು ಮೈಸೂರು ಸಂಸ್ಥಾನಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಕಂಬನಿ ಮಿಡಿದಿದ್ದಾರೆ

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T